# ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ ಅಧಿನಿಯಮ, 2005

## ಪ್ರಕರಣಗಳ ಕ್ರಮಪಟ್ಟಿ

**ಪ್ರಕರಣಗಳು**

### ಅಧ್ಯಾಯ - I

### ಪ್ರಾರಂಭಿಕ


1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ
2. ಪರಿಭಾಷೆಗಳು


### ಅಧ್ಯಾಯ - II

### ಮಂಡಳಿ ಮತ್ತು ಅದರ ಉದ್ಯೋಗಿಗಳು


3. ಮಂಡಳಿಯ ರಚನೆ
4. ಪದಾವಧಿ ಮತ್ತು ಸೇವಾ ಷರತ್ತುಗಳು
5. ಸದಸ್ಯತ್ವಕ್ಕೆ ಅನರ್ಹತೆಗಳು
6. ಸದಸ್ಯನನ್ನು ತೆಗೆದು ಹಾಕುವುದು
7. ಮರು ನೇಮಕಾತಿಗೆ ಅರ್ಹತೆ
8. ಮಂಡಳಿಯ ಅಧಿಕಾರಗಳು
9. ಮಂಡಳಿಯ ಉಪ-ಸಮಿತಿ
10. ಆಯುಕ್ತರ ನೇಮಕಾತಿ
11. ಆಯುಕ್ತರ ಅಧಿಕಾರಗಳು ಮತ್ತು ಕರ್ತವ್ಯಗಳು
12. ಮಂಡಳಿಯ ನೌಕರರು
13. ಮಂಡಳಿಯ ಅಡಿಯಲ್ಲಿನ ಸೇವೆಗೆ ಸಾಮಾನ್ಯ ಅನರ್ಹತೆಗಳು
14. ಮಂಡಳಿಯ ಸಭೆಗಳು
15. ವ್ಯವಹರಣೆಗಳು ಸರಿಯಾದುದೆಂದು ಮತ್ತು ಊರ್ಜಿತವಾದುದೆಂದು ಪೂರ್ವಭಾವನೆ ಮಾಡುವುದು
16. ಸುತ್ತೋಲೆಯ ಮೂಲಕ ಮಂಡಳಿಯ ತೀರ್ಮಾನಗಳನ್ನು ಸೂಚಿಸುವುದು
17. ಕೆಲವೊಂದು ತೀರ್ಮಾನಗಳನ್ನು ಕೈಗೊಳ್ಳಲು ಅಧ್ಯಕ್ಷರ ಅಧಿಕಾರ

## ಅಧ್ಯಾಯ III

### ಬಸವ ಕಲ್ಯಾಣ ಕ್ಷೇತ್ರದ ಅಭಿವೃದ್ಧಿ ಮತ್ತು ನಿರ್ವಹಣೆ


18. ಬಸವಕಲ್ಯಾಣದಲ್ಲಿನ ಪರಂಪರೆಯ ತಾಣಗಳನ್ನು ಮಂಡಳಿಯಲ್ಲಿ ನಿಹಿತಗೊಳಿಸುವುದು
19. ಅನುಸೂಚಿಯ ತಿದ್ದುಪಡಿಗೆ ಅಧಿಕಾರ
20. ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸುವುದು, ಅದರ ಅನುಮೋದನೆ ಹಾಗೂ ಅದನ್ನು ಕಾರ್ಯಗತಗೊಳಿಸುವುದು
21. ಬಸವ ಕಲ್ಯಾಣದ ನಿರ್ವಹಣೆ
22. ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿಯು ಬಸವಕಲ್ಯಾಣಕ್ಕೆ ನಗರಾಭಿವೃದ್ಧಿ ಪ್ರಾಧಿಕಾರವಾಗಿರುವುದು
23. ಮಂಡಳಿಯ ಅನುಮತಿ ಇಲ್ಲದೆ ಯಾವುದೇ ಇತರ ಪ್ರಾಧಿಕಾರ ಅಥವಾ ವ್ಯಕ್ತಿಯು ಅಭಿವೃದ್ಧಿಯನ್ನು ಕೈಗೊಳ್ಳಕೂಡದು
24. ಪ್ರವೇಶಕ್ಕೆ ಅಧಿಕಾರ
25. ಶುಲ್ಕ ವಿಧಿಸುವುದು
26. ಮಂಡಳಿಗೆ ರಾಜ್ಯ ಸರ್ಕಾರದ ಅಧಿಕಾರಗಳ ಪ್ರತ್ಯಾಯೋಜನೆ
27. ಬೀದಿ ಮುಂತಾದವುಗಳ ನಿರ್ವಹಣೆ ಕರ್ತವ್ಯ
28. 1974ರ ಕರ್ನಾಟಕ ಅಧಿನಿಯಮ 32ನ್ನು ಮಂಡಳಿಯ ಆವರಣಕ್ಕೆ ಅನ್ವಯಿಸುವುದು
29. ಪ್ರವಾಸೋದ್ಯಮಕ್ಕೆ ಮತ್ತು ಯಾತ್ರೆ ಕೈಗೊಳ್ಳುವುದಕ್ಕೆ ಮಂಡಳಿಯು ಉತ್ತೇಜಿಸುವುದು
30. ಅಧಿಕಾರಗಳ ಪ್ರತ್ಯಾಯೋಜನೆ


## ಅಧ್ಯಾಯ IV

### ಹಣಕಾಸು ಮತ್ತು ಸ್ವತ್ತು


31. ಮಂಡಳಿಯ ನಿಧಿ
32. ನಿಧಿಯ ಬಳಕೆ
33. ಸರ್ಕಾರದಿಂದ ಅನುದಾನ
34. ಮಂಡಲಿಯ ಆಯವ್ಯಯ
35. ಲೆಕ್ಕ ಪತ್ರಗಳು ಮತ್ತು ಲೆಕ್ಕಪರಿಶೋಧನೆ
36. ವರದಿಗಳು

## ಅಧ್ಯಾಯ V

### ಸಂಕೀರ್ಣ


37. ಮಂಡಳಿಯು ತನ್ನ ಅಧಿಕಾರ ವ್ಯಾಪ್ತಿಯೊಳಗಿನ ಯಾವುದೇ ಜಮೀನನ್ನು ಮಾರಾಟ ಮಾಡಕೂಡದು

38. ಕೆಲವು ವ್ಯಕ್ತಿಗಳು ಸಾರ್ವಜನಿಕ ನೌಕರರಾಗಿರತಕ್ಕದ್ದು

39. ಈ ಅಧಿನಿಯಮದ ಅಡಿ ಸದ್ಭಾವನೆಯಿಂದ ಕೈಗೊಂಡ ಕ್ರಮಕ್ಕೆ ರಕ್ಷಣೆ

40. ಕರ್ತವ್ಯ ನಿರ್ವಹಣೆಯಲ್ಲಿ ಲೋಪ

41. ಮಂಡಳಿಯ ವಿಘಟನೆ

42. ರಾಜ್ಯ ಸರ್ಕಾರದ ನಿಯಂತ್ರಣ

43. ನಿರ್ದೇಶನಗಳನ್ನು ನೀಡುವುದಕ್ಕೆ ರಾಜ್ಯ ಸರ್ಕಾರದ ಅಧಿಕಾರ

44. ತೊಂದರೆಗಳ ನಿವಾರಣೆ

45. ನಿಯಮಗಳ ರಚನಾಧಿಕಾರ

46. ವಿನಿಯಮಗಳ ರಚನಾಧಿಕಾರ

47. ನಿರಸನ ಮತ್ತು ಉಳಿಸುವಿಕೆಗಳು

ಅನುಸೂಚಿ


### ಉದ್ದೇಶ ಮತ್ತು ಕಾರಣಗಳ ಹೇಳಿಕೆ

ಬೀದರ್ ಜಿಲ್ಲೆಯ ಬಸವಕಲ್ಯಾಣ ಪಟ್ಟಣದಲ್ಲಿನ ಮತ್ತು ಅದರ ಸುತ್ತ ಮುತ್ತಲಿನ ಪರಂಪರೆಯ ತಾಣಗಳ ಸಂರಕ್ಷಣೆ, ಅಭಿವೃದ್ಧಿ ಮತ್ತು ನಿರ್ವಹಣೆಗಾಗಿ ಮತ್ತು ಬಸವಕಲ್ಯಾಣವನ್ನು ಅಂತಾರಾಷ್ಟ್ರೀಯ ಯಾತ್ರಾಸ್ಥಳವನ್ನಾಗಿ, ಸಾಂಸ್ಕೃತಿಕ ಮತ್ತು ಪ್ರವಾಸ ಕೇಂದ್ರವನ್ನಾಗಿ ಅಭಿವೃದ್ಧಿಗೊಳಿಸುವುದಕ್ಕಾಗಿ ಕಾನೂನಿನ ಮೂಲಕ ಒಂದು ಮಂಡಳಿಯನ್ನು ರಚಿಸುವುದು ಅವಶ್ಯಕವೆಂದು ಪರಿಗಣಿಸಲಾಗಿದೆ. ಈ ವಿಧೇಯಕವು ಇತರೆ ವಿಷಯಗಳೊಂದಿಗೆ ಮಂಡಳಿಯ ರಚನೆಗಾಗಿ ಮತ್ತು ಅದರಲ್ಲಿ ಶುಲ್ಕವಿಧಿಸುವುದು, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸಂಘಟಿಸುವುದು ಮತ್ತು ಪ್ರವಾಸೋದ್ಯಮವನ್ನು ಉತ್ತೇಜಿಸುವುದು ಹಾಗೂ ಪ್ರಾಸಂಗಿಕವಾಗಿ ತನ್ನದೇ ಆದ ವಿನಿಯಮಗಳನ್ನು ರಚಿಸುವುದು ಮತ್ತು ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳುವುದು ಇವೇ ಮುಂತಾದವುಗಳು ಒಳಗೊಂಡಂತೆ ನಗರಾಭಿವೃದ್ಧಿ ಪ್ರಾಧಿಕಾರ ಮತ್ತು ಯೋಜನಾ ಪ್ರಾಧಿಕಾರದ ಅಧಿಕಾರಗಳನ್ನು ಆ ಮಂಡಳಿಯಲ್ಲಿ ನಿಹಿತಗೊಳಿಸಲು ಉಪಬಂಧಕಲ್ಪಿಸುತ್ತದೆ.

ವಿಷಯವು ತುರ್ತು ಸ್ವರೂಪದ್ದಾದುದರಿಂದ ಮತ್ತು ಕರ್ನಾಟಕ ವಿಧಾನಮಂಡಲದ ಎರಡೂ ಸದನಗಳು ಅಧಿವೇಶನದಲ್ಲಿಲ್ಲದಿದ್ದುದರಿಂದ ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ ಅಧ್ಯಾದೇಶ, 2004ನ್ನು (2004ರ ಕರ್ನಾಟಕ ಅಧ್ಯಾದೇಶ 4) 2004ರ ನವೆಂಬರ್ 12 ರಂದು ಪ್ರಖ್ಯಾಪಿಸಲಾಯಿತು.

ಸದರಿ ಅಧ್ಯಾದೇಶಕ್ಕೆ ಬದಲಾಗಿ ಈ ವಿಧೇಯಕವನ್ನು ಮಂಡಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

(2005ರ ವಿಧಾನಪರಿಷತ್ತಿನ ವಿಧೇಯಕ ಸಂಖ್ಯೆ 3)

## 2005 ರ ಕರ್ನಾಟಕ ಅಧಿನಿಯಮ ಸಂಖ್ಯೆ 13

(2005 ರ ಏಪ್ರಿಲ್ ಐದನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ ಅಧಿನಿಯಮ, 2005

(2005 ರ ಏಪ್ರಿಲ್ ಎರಡನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಬೀದರ್ ಜಿಲ್ಲೆಯ ಬಸವಕಲ್ಯಾಣ ಪಟ್ಟಣದಲ್ಲಿನ ಮತ್ತು ಅದರ ಸುತ್ತಮುತ್ತಲಿನ ಪರಂಪರೆಯ ತಾಣಗಳ ಅಭಿವೃದ್ಧಿ ಮತ್ತು ನಿರ್ವಹಣೆಗೆ ಒಂದು ಮಂಡಳಿಯನ್ನು ಸ್ಥಾಪಿಸುವುದಕ್ಕಾಗಿ ಉಪಬಂಧ ಕಲ್ಪಿಸಲು ಒಂದು ಅಧಿನಿಯಮ.

ಬೀದರ್ ಜಿಲ್ಲೆಯ ಬಸವಕಲ್ಯಾಣ ಪಟ್ಟಣದಲ್ಲಿನ ಮತ್ತು ಅದರ ಸುತ್ತಮುತ್ತಲಿನ ಪರಂಪರೆಯ ತಾಣಗಳನ್ನು ಅಂತಾರಾಷ್ಟ್ರೀಯ ಯಾತ್ರಾ ಸ್ಥಳವಾಗಿ, ಸಾಂಸ್ಕೃತಿಕ ಮತ್ತು ಪ್ರವಾಸ ಕೇಂದ್ರವಾಗಿ ಅಭಿವೃದ್ಧಿಗೊಳಿಸಲು ಮತ್ತು ಅದನ್ನು ನಿರ್ವಹಿಸಲು ಒಂದು ಮಂಡಳಿಯ ಸ್ಥಾಪನೆಗೆ ಉಪಬಂಧ ಕಲ್ಪಿಸುವುದು ಯುಕ್ತವಾಗಿರುವುದರಿಂದ;

ಇದು, ಭಾರತ ಗಣರಾಜ್ಯದ ಐವತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

### ಅಧ್ಯಾಯ - I

### ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಬಸವಕಲ್ಯಾಣ ಅಭಿವೃದ್ಧಿ ಮಂಡಳಿ ಅಧಿನಿಯಮ, 2005 ಎಂದು ಕರೆಯತಕ್ಕದ್ದು.

(2) ಇದು 2ನೇ ಪ್ರಕರಣದ (ಬಿ) ಖಂಡದಲ್ಲಿ ಪರಿಭಾಷಿಸಲಾದಂತೆ ಬಸವಕಲ್ಯಾಣದ ಪ್ರದೇಶಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯಸರ್ಕಾರವು ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದಂಥ ದಿನಾಂಕದಿಂದ ಜಾರಿಗೆ ಬರತಕ್ಕದ್ದು, ಮತ್ತು ಅಧಿನಿಯಮದ ಬೇರೆ ಬೇರೆ ಉಪಬಂಧಗಳಿಗೆ ಬೇರೆ ಬೇರೆ ದಿನಾಂಕಗಳನ್ನು ಗೊತ್ತುಪಡಿಸಬಹುದು.

**2. ಪರಿಭಾಷೆಗಳು.-** ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಸೌಕರ್ಯ" ಎಂಬುದರಲ್ಲಿ ರಸ್ತೆಗಳು, ಬೀದಿಗಳು, ಸುರಂಗ ಮಾರ್ಗಗಳು, ದೀಪವ್ಯವಸ್ಥೆ, ಚರಂಡಿ ವ್ಯವಸ್ಥೆ, ನಿರ್ಮಲೀಕರಣ, ವಿದ್ಯುಚ್ಛಕ್ತಿ ಮತ್ತು ನೀರು ಸರಬರಾಜು ಅಥವಾ ಇತರ ಅನುಕೂಲಗಳು; ಲೋಕೋಪಯೋಗಿ ಕಾಮಗಾರಿಗಳು, ಮಾರುಕಟ್ಟೆ ಸ್ಥಳಗಳು, ಅಂಚೆ ಕಚೇರಿ, ಬ್ಯಾಂಕು, ಆಸ್ಪತ್ರೆ, ಚಿಕಿತ್ಸಾಲಯ, ಪೊಲೀಸು ಠಾಣೆ, ನ್ಯಾಯಬೆಲೆ ಅಂಗಡಿ, ಹಾಲಿನ ಕೇಂದ್ರ, ಗ್ರಂಥಾಲಯ, ಮನೋರಂಜನಾ ಕೇಂದ್ರಗಳು, ಮಂಡಳಿಯು ಪ್ರಾಧಿಕೃತಗೊಳಿಸಿದ ಜನೋಪಯೋಗಿ ಸೇವೆಯ ಯಾವುವೇ ಸೇವಾ ಕೇಂದ್ರಗಳು, ಅಥವಾ ಇತರ ಸೌಲಭ್ಯಗಳು; ಮತ್ತು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ಇತರ ಸೌಕರ್ಯಗಳು ಒಳಗೊಳ್ಳುತ್ತವೆ;

---

ಕರ್ನಾಟಕ ರಾಜ್ಯ ಪತ್ರದ ಭಾಗ-IVಎ ವಿಶೇಷ ಪತ್ರಿಕೆ ಸಂಖ್ಯೆ: 478 ದಿನಾಂಕ: 5.4.2005 ರಲ್ಲಿ ಪ್ರಕಟಿತ ಕಡತ ಸಂಖ್ಯೆ: ಸಂವ್ಯಶಾಇ 47 ಶಾಸನ 2004

(ಬಿ) 'ಮಂಡಳಿ' ಎಂದರೆ, 3ನೇ ಪ್ರಕರಣದ ಅಡಿಯಲ್ಲಿ ರಚಿಸಿದ ಬಸವಕಲ್ಯಾಣ ಅಭಿವೃದ್ಧಿ ಮಂಡಳಿ;

(ಸಿ) 'ಬಸವ ಕಲ್ಯಾಣ' ಎಂದರೆ, ಅದು ಬಸವ ಕಲ್ಯಾಣ ಪಟ್ಟಣದ ಪುರಸಭಾಸಮಿತಿಯ ಸರಹದ್ದಿನೊಳಗಿನ ಮತ್ತು ಪಟ್ಟಣದಿಂದ ಹನ್ನೆರಡು ಕಿಲೋ ಮೀಟರುಗಳೊಳಗಿನ ಪ್ರದೇಶ ಮತ್ತು ಬಸವಕಲ್ಯಾಣದ ಪರಂಪರೆಯ ತಾಣಗಳ ಅಭಿವೃದ್ಧಿಗಾಗಿ ಕಾಲಕಾಲಕ್ಕೆ ಸರ್ಕಾರವು ಆರ್ಜಿಸಬಹುದಾದ ಭೂ-ಪ್ರದೇಶ ಹಾಗೂ ಅಧಿಸೂಚನೆಯ ಮೂಲಕ ರಾಜ್ಯಸರ್ಕಾರವು ಘೋಷಿಸಬಹುದಾದಂಥ ಇತರೆ ಪ್ರದೇಶಗಳು ಮತ್ತು ಅದು ಅವುಗಳನ್ನು ಒಳಗೊಳ್ಳುತ್ತದೆ.

(ಡಿ) 'ಅಧ್ಯಕ್ಷ' ಎಂದರೆ, ಮಂಡಳಿಯ ಅಧ್ಯಕ್ಷ;

(ಇ) 'ಆಯುಕ್ತ' ಎಂದರೆ, 10ನೇ ಪ್ರಕರಣದ ಅಡಿಯಲ್ಲಿ ನೇಮಕ ಮಾಡಲಾದ ಮಂಡಳಿಯ ಆಯುಕ್ತ;

(ಎಫ್) 'ನಿಧಿ' ಎಂದರೆ, ಮಂಡಳಿಯ ನಿಧಿ;

(ಜಿ) "ಪರಂಪರೆಯ ತಾಣ" ಎಂದರೆ, ಪ್ರಾಚೀನ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳ ಹಾಗೂ ಅವಶೇಷಗಳ ಅಧಿನಿಯಮ 1958ರ (1958ರ ಕೇಂದ್ರ ಅಧಿನಿಯಮ 24) ಅಡಿಯಲ್ಲಿ ಸಂರಕ್ಷಿತ ಪ್ರದೇಶವೆಂದು ಉಲ್ಲೇಖಿಸಲಾದ ಪ್ರದೇಶವನ್ನು ಹೊರತುಪಡಿಸಿ, ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ತಾಣಗಳನ್ನು ಒಳಗೊಳ್ಳುವ ಸಂಪೂರ್ಣ ಪ್ರದೇಶವಾಗಿದೆ.

(ಎಚ್) 'ಸದಸ್ಯ' ಎಂದರೆ, ಮಂಡಳಿಯ ಸದಸ್ಯ;

(ಐ) 'ವಿನಿಯಮಗಳು' ಎಂದರೆ, 46ನೇ ಪ್ರಕರಣದ ಅಡಿಯಲ್ಲಿ ರಚಿಸಿದ ಮಂಡಳಿಯ ವಿನಿಯಮಗಳು;

(ಜೆ) 'ಅನುಸೂಚಿ' ಎಂದರೆ, ಈ ಅಧಿನಿಯಮಕ್ಕೆ ಲಗತ್ತಿಸಲಾದ ಅನುಸೂಚಿ;

## ಅಧ್ಯಾಯ - II

## ಮಂಡಳಿ ಮತ್ತು ಅದರ ಉದ್ಯೋಗಿಗಳು

**3. ಮಂಡಳಿಯ ರಚನೆ.-** (1) ಈ ಅಧಿನಿಯಮದ ಪ್ರಾರಂಭದ ತರುವಾಯ ಆದಷ್ಟು ಬೇಗನೇ, ಈ ಅಧಿನಿಯಮದ ಉದ್ದೇಶಗಳಿಗಾಗಿ, 'ಬಸವಕಲ್ಯಾಣ ಅಭಿವೃದ್ಧಿ ಮಂಡಳಿ' ಎಂದು ಕರೆಯಲಾಗುವ ಒಂದು ಮಂಡಳಿಯನ್ನು ಸ್ಥಾಪಿಸತಕ್ಕದ್ದು.

(2) ಮಂಡಳಿಯು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ಸ್ಥಳದಲ್ಲಿ ತನ್ನ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರತಕ್ಕದ್ದು.

(3) ಮಂಡಳಿಯು, ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಚರ ಮತ್ತು ಸ್ಥಿರ ಸ್ವತ್ತುಗಳೆರಡನ್ನು ಆರ್ಜಿಸುವ, ಧಾರಣ ಮಾಡುವ ಹಾಗೂ ವಿಲೆ ಮಾಡುವ ಮತ್ತು ಕರಾರು ಮಾಡಿಕೊಳ್ಳುವ ಅಧಿಕಾರವನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು.

(4) ಮಂಡಳಿಯು ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(ಎ) ಮುಖ್ಯಮಂತ್ರಿಗಳು, ಇವರು ಮಂಡಳಿಯ ಪದನಿಮಿತ್ತ ಅಧ್ಯಕ್ಷರಾಗಿರತಕ್ಕದ್ದು;

(ಬಿ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪ್ರಭಾರದಲ್ಲಿರುವ ಸಚಿವರು;

(ಸಿ) ಕಂದಾಯ ಇಲಾಖೆಯ ಪ್ರಭಾರದಲ್ಲಿರುವ ಸಚಿವರು;

(ಡಿ) ಬಸವಕಲ್ಯಾಣ ಕ್ಷೇತ್ರವನ್ನು ಭಾಗಶಃ ಅಥವಾ ಪೂರ್ಣವಾಗಿ ಪ್ರತಿನಿಧಿಸುವ ಹಾಗೂ ಅದರ ಎಲ್ಲೆಗಳೊಳಗೆ ತಮ್ಮ ಚುನಾವಣಾ ಕ್ಷೇತ್ರವನ್ನು ಹೊಂದಿರುವ ಸಂಸತ್ ಸದಸ್ಯರು ಮತ್ತು ರಾಜ್ಯ ವಿಧಾನಮಂಡಲದ ಸದಸ್ಯರು;

(ಇ) ಅಧ್ಯಕ್ಷರು, ಬಸವಸಮಿತಿ, ಬಸವಭವನ, ಬೆಂಗಳೂರು;

(ಎಫ್) ಅಧ್ಯಕ್ಷರು, ಅಖಿಲ ಭಾರತ ವೀರಶೈವ ಮಹಾಸಭಾ, ಬೆಂಗಳೂರು;

(ಜಿ) ಶರಣ ಬಸವೇಶ್ವರರು ಅಂಗೀಕರಿಸಿ ಸಾರಿದ ತತ್ವಗಳ ಅನುಷ್ಠಾನಕ್ಕಾಗಿ ದುಡಿದಂಥ, ರಾಜ್ಯಸರ್ಕಾರವು ನಾಮನಿರ್ದೇಶಿಸಿದ ಐವರಿಗೆ ಮೀರದ ಸದಸ್ಯರು, ಅವರುಗಳಲ್ಲಿ ಒಬ್ಬರು ಮುಖ್ಯ ಇಂಜಿನಿಯರ್, ಸಿವಿಲ್ ಹುದ್ದೆಯನ್ನು ಹೊಂದಿದ್ದ ವ್ಯಕ್ತಿಯಾಗಿರತಕ್ಕದ್ದು;

(ಎಚ್) ಸರ್ಕಾರದ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ;

(ಐ) ಸರ್ಕಾರದ ಕಾರ್ಯದರ್ಶಿ, ಕಂದಾಯ ಇಲಾಖೆ;

(ಜೆ) ಸರ್ಕಾರದ ಕಾರ್ಯದರ್ಶಿ, ಹಣಕಾಸು ಇಲಾಖೆ;

(ಕೆ) ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ/ಪೌರಾಡಳಿತ ಇಲಾಖೆ;

(ಎಲ್) ನಿರ್ದೇಶಕರು, ಪೌರಾಡಳಿತ ಇಲಾಖೆ;

(ಎಂ) ನಿರ್ದೇಶಕರು, ಪಟ್ಟಣ ಮತ್ತು ಗ್ರಾಮಾಂತರ ಯೋಜನೆ;

(ಎನ್) ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ;

(ಓ) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್;

(ಪಿ) ಅಧ್ಯಕ್ಷರು, ಪುರಸಭಾ ಪರಿಷತ್, ಬಸವಕಲ್ಯಾಣ;

(ಕ್ಯೂ) ನಿರ್ದೇಶಕರು, ಕರ್ನಾಟಕ ಪ್ರಾಚ್ಯವಸ್ತು ಮತ್ತು ವಸ್ತು ಸಂಗ್ರಹಾಲಯ ಇಲಾಖೆ;

(ಆರ್) ರಾಜ್ಯಸರ್ಕಾರದಿಂದ ನಾಮ ನಿರ್ದೇಶಿತರಾದ ಐವರನ್ನು ಮೀರದಂಥ ಇತರ ಪದನಿಮಿತ್ತ ಸದಸ್ಯರು;

(ಎಸ್)ಮಂಡಳಿಯ ಆಯುಕ್ತರು, ಇವರು ಸದಸ್ಯ-ಕಾರ್ಯದರ್ಶಿಯಾಗಿರತಕ್ಕದ್ದು.

**4. ಪದಾವಧಿ ಮತ್ತು ಸೇವಾ ಷರತ್ತುಗಳು.-** (1) ರಾಜ್ಯ ಸರ್ಕಾರದ ಇಚ್ಛೆಗೊಳಪಟ್ಟು, ರಾಜ್ಯ ಸರ್ಕಾರವು ನಾಮನಿರ್ದೇಶಿಸಿದ ಸರ್ಕಾರೇತರ ಸದಸ್ಯರು ಮೂರು ವರ್ಷಗಳ ಅವಧಿಗೆ ಪದಧಾರಣ ಮಾಡತಕ್ಕದ್ದು;

(2) ಯಾವೊಬ್ಬ ಸರ್ಕಾರೇತರ ಸದಸ್ಯನು ತನ್ನ ಸಹಿಯೊಂದಿಗೆ ರಾಜ್ಯ ಸರ್ಕಾರಕ್ಕೆ ಬರೆಯುವ ಮೂಲಕ ತನ್ನ ಪದಕ್ಕೆ ರಾಜೀನಾಮೆ ನೀಡಬಹುದು. ಆದರೆ ತನ್ನ ರಾಜೀನಾಮೆಯು ಅಂಗೀಕಾರವಾಗುವವರೆಗೂ ಪದದಲ್ಲಿ ಮುಂದುವರೆಯತಕ್ಕದ್ದು.

(3) ಅಧಿಕಾರೇತರ ಸದಸ್ಯರು ನಿಯಮಿಸಬಹುದಾದಂಥ ಭತ್ಯಗಳನ್ನು ಪಡೆಯತಕ್ಕದ್ದು.

**5. ಸದಸ್ಯತ್ವಕ್ಕೆ ಅನರ್ಹತೆಗಳು.-** ಒಬ್ಬ ವ್ಯಕ್ತಿಯು,-

(ಎ) ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದು ಕಾರವಾಸದ ಶಿಕ್ಷೆಗೆ ಗುರಿಯಾಗಿದ್ದರೆ; ಅಥವಾ

(ಬಿ) ಅಸ್ವಸ್ಥ ಚಿತ್ತದವನಾಗಿದ್ದರೆ ಮತ್ತು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿತನಾಗಿದ್ದರೆ; ಅಥವಾ

(ಸಿ) ಅವಿಮುಕ್ತ ದಿವಾಳಿಯಾಗಿದ್ದರೆ; ಅಥವಾ

(ಡಿ) ಕೇಂದ್ರ ಸರ್ಕಾರದ ಅಥವಾ ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ಒಂದು ನಿಕಾಯ ಅಥವಾ ನಿಗಮದ ಸೇವೆಯಿಂದ ತೆಗೆದು ಹಾಕಲಾದ ವ್ಯಕ್ತಿಯಾಗಿದ್ದರೆ ಅಥವಾ ವಜಾ ಮಾಡಲಾದ ವ್ಯಕ್ತಿಯಾಗಿದ್ದರೆ; ಅಥವಾ

(ಇ) ಮಂಡಳಿಯ ಆದೇಶದಿಂದ ಮಾಡಲಾದ ಯಾವುದೇ ಕಾಮಗಾರಿಯಲ್ಲಿ ಅಥವಾ ಮಂಡಳಿಯೊಡನೆ ಅಥವಾ ಅದರ ಅಡಿಯಲ್ಲಿ ಅಥವಾ ಅದರ ಮೂಲಕ ಅಥವಾ ಅದರ ಪರವಾಗಿ ಮಾಡಿಕೊಂಡ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಸ್ವಯಂ ತಾನೇ ಅಥವಾ ಒಬ್ಬ ಪಾಲುದಾರನ ಅಥವಾ ಏಜೆಂಟನ ಮೂಲಕ ಪ್ರತ್ಯಕ್ಷ ಅಥವಾ ಪರೋಕ್ಷವಾಗಿ ಯಾವುದೇ ಷೇರನ್ನು ಅಥವಾ ಹಿತಾಸಕ್ತಿಯನ್ನು ಹೊಂದಿದ್ದರೆ; ಅಥವಾ

(ಎಫ್) ಮಂಡಳಿಯ ಪರವಾಗಿ, ವೇತನ ಪಡೆಯುವ ನ್ಯಾಯವಾದಿಯಾಗಿ ನಿಯೋಜಿತನಾಗಿದ್ದರೆ ಅಥವಾ ಮಂಡಲಿಯ ವಿರುದ್ಧವಾಗಿ ನ್ಯಾಯವಾದಿಯ ನಿಯೋಜನೆಯನ್ನು ಒಪ್ಪಿಕೊಂಡಿದ್ದರೆ,

-ಅವನು ಸದಸ್ಯನಾಗಿ ನೇಮಕ ಹೊಂದಲು ಅಥವಾ ಸದಸ್ಯನಾಗಿರಲು ಅನರ್ಹನಾಗತಕ್ಕದ್ದು:

ಪರಂತು, ಒಬ್ಬ ವ್ಯಕ್ತಿಯು, ಮಂಡಳಿಯ ವ್ಯವಹಾರಗಳಿಗೆ ಸಂಬಂಧಪಟ್ಟ ಯಾವುದೇ ಜಾಹೀರಾತನ್ನು ಪ್ರಕಟಿಸಿರುವ ಯಾವುದೇ ವೃತ್ತ ಪತ್ರಿಕೆಯಲ್ಲಿ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದಾನೆಂಬ ಕಾರಣ ಮಾತ್ರದಿಂದಲೇ (1)ನೇ ಉಪ-ಪ್ರಕರಣದ (ಇ) ಖಂಡದ ಅಡಿಯಲ್ಲಿ ಅನರ್ಹನಾಗತಕ್ಕದ್ದಲ್ಲ ಅಥವಾ ಸದರಿ ಖಂಡದ ಅರ್ಥ ವ್ಯಾಪ್ತಿಯಲ್ಲಿ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಯಾವುದೇ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದಾನೆಂದು ಭಾವಿಸತಕ್ಕದ್ದಲ್ಲ.

**6. ಸದಸ್ಯನನ್ನು ತೆಗೆದು ಹಾಕುವುದು.-** (1) ರಾಜ್ಯ ಸರ್ಕಾರವು ಸದಸ್ಯರೊಬ್ಬರನ್ನು, ಆತ,-

(ಎ) 5ನೇ ಪ್ರಕರಣದಲ್ಲಿ ಹೇಳಲಾದ ಅನರ್ಹತೆಗಳಲ್ಲಿ ಯಾವುದೇ ಅನರ್ಹತೆಗೆ ಒಳಪಟ್ಟರೆ:

ಪರಂತು ಯಾವ ಸದಸ್ಯರನ್ನೂ, ಆತ ಆ ಪ್ರಕರಣದ (1)ನೇ ಉಪ ಪ್ರಕರಣದ (ಇ) ಖಂಡದಲ್ಲಿ ಹೇಳಲಾದ ಅನರ್ಹತೆಗೆ ಒಳಗಾಗಿದ್ದಾನೆಂಬ ಕಾರಣದ ಮೇಲೆ, ಸದರಿ ಪ್ರಸ್ತಾವದ ವಿರುದ್ಧ ತನ್ನ ಮನವಿಯನ್ನು ಸಲ್ಲಿಸಲು ಅವನಿಗೆ ಒಂದು ಅವಕಾಶವನ್ನು ಕೊಟ್ಟ ಹೊರತು, ತೆಗೆದು ಹಾಕತಕ್ಕದ್ದಲ್ಲ; ಅಥವಾ

(ಬಿ) ಆತ ಕಾರ್ಯ ನಿರ್ವಹಿಸಲು ನಿರಾಕರಿಸಿದರೆ ಅಥವಾ ಕಾರ್ಯವನ್ನು ನಿರ್ವಹಿಸಲು ಅಸಮರ್ಥನಾದರೆ; ಅಥವಾ

(ಸಿ) ಗೈರು ಹಾಜರಾಗಲು ಮಂಡಲಿಯಿಂದ ಅನುಮತಿ ಪಡೆಯದೆ ಮಂಡಳಿಯ ಮೂರು ನಿರಂತರ ಸಭೆಗಳಿಗೆ ಗೈರುಹಾಜರಾದರೆ:

ಪರಂತು, ಈ ಖಂಡವು ಪದನಿಮಿತ್ತ ಸದಸ್ಯರಿಗೆ ಅನ್ವಯವಾಗತಕ್ಕದ್ದಲ್ಲ; ಅಥವಾ

(ಡಿ) ಅವರನ್ನು ಆ ಪದದಲ್ಲಿ ಮುಂದುವರಿಸಿದರೆ, ಸಾರ್ವಜನಿಕ ಹಿತಾಸಕ್ತಿಗೆ ಬಾಧಕ ಉಂಟಾಗುವಂತೆ ತನ್ನ ಸ್ಥಾನವನ್ನು ಆತ ದುರುಪಯೋಗಪಡಿಸಿಕೊಳ್ಳುವರೆಂದು ರಾಜ್ಯ ಸರ್ಕಾರವು ಅಭಿಪ್ರಾಯಪಟ್ಟರೆ,

- ಸದಸ್ಯ ಸ್ಥಾನದಿಂದ ತೆಗೆದುಹಾಕತಕ್ಕದ್ದು;

ಪರಂತು, ಯಾವ ಸದಸ್ಯರನ್ನೂ ಅವರಿಗೆ ಸದರಿ ಪ್ರಸ್ತಾವದ ವಿರುದ್ಧ ತನ್ನ ಮನವಿಯನ್ನು ಹೇಳಿಕೊಳ್ಳಲು ಒಂದು ಅವಕಾಶವನ್ನು ಕೊಟ್ಟ ಹೊರತು ಈ ಖಂಡದ ಅಡಿಯಲ್ಲಿ ತೆಗೆದು ಹಾಕತಕ್ಕದ್ದಲ್ಲ.

**7. ಮರು ನೇಮಕಾತಿಗೆ ಅರ್ಹತೆ.-** ಸದಸ್ಯತ್ವ ಕೊನೆಗೊಂಡ ಯಾವೊಬ್ಬ ವ್ಯಕ್ತಿಯು, 5ನೇ ಪ್ರಕರಣದಲ್ಲಿ ಹೇಳಲಾದ ಅನರ್ಹತೆಗೊಳಗಾಗಿದ್ದಾಗ ಹೊರತು, ಸದಸ್ಯರಾಗಿ ಮರುನೇಮಕ ಹೊಂದಲು ಅರ್ಹರಾಗಿರತಕ್ಕದ್ದು.

**8. ಮಂಡಳಿಯ ಅಧಿಕಾರಗಳು.-** (1) ಮಂಡಳಿಯು, ಈ ಅಧಿನಿಯಮದ ಆಶಯಗಳು ಮತ್ತು ಉಪಬಂಧಗಳನ್ನು ಜಾರಿಗೆ ತರಲು ತಾನು ಅವಶ್ಯವೆಂದು ಅಭಿಪ್ರಾಯ ಪಡುವಂಥ ಯಾವುವೇ ಕಾರ್ಯಗಳನ್ನು ಮಾಡಲು ಸಾಮಾನ್ಯವಾಗಿ ಅಧಿಕಾರ ಹೊಂದಿರತಕ್ಕದ್ದು:

ಪರಂತು, ಈ ಪ್ರಕರಣದಲ್ಲಿ ಇರುವುದು ಯಾವುದೂ, ಇತರ ಯಾವುದೇ ಪ್ರಾಧಿಕಾರದ ಮೂಲಕ ನೆರವೇರಿಸಬೇಕೆಂದು ಅಧಿನಿಯಮದಲ್ಲಿ ನಿರ್ದಿಷ್ಟವಾಗಿ ತಿಳಿಸಿದಂಥ ಯಾವುದೇ ಕಾರ್ಯವನ್ನು ನೆರವೇರಿಸುವುದಕ್ಕೆ ಮಂಡಳಿಗೆ ಅಧಿಕಾರ ನೀಡುತ್ತದ್ದೆಂದು ಭಾವಿಸತಕ್ಕದ್ದಲ್ಲ.

(2) (1)ನೇ ಉಪ-ಪ್ರಕರಣದ ಸಾಮಾನ್ಯಾನ್ವಯಕ್ಕೆ ಬಾಧಕವಾಗದಂತೆ ಮಂಡಳಿಯು,-

(ಎ) ನಿಯಮಿಸಬಹುದಾದಂಥ ನಿಯಮಗಳಿಗೆ ಒಳಪಟ್ಟು, ಈ ಅಧಿನಿಯಮದ ಯಾವುದೇ ಉದ್ದೇಶವನ್ನು ನೆರವೇರಿಸಲು ಅವಶ್ಯಕ ಅಥವಾ ಯುಕ್ತವೆಂದು ತಾನು ಪರಿಗಣಿಸುವಂಥ ಎಲ್ಲ ಕರಾರುಗಳನ್ನು ಮಾಡಿಕೊಳ್ಳಲು ಮತ್ತು ನಿರ್ವಹಿಸಲು ಅಧಿಕಾರ ಹೊಂದಿರತಕ್ಕದ್ದು ಮತ್ತು ಪ್ರತಿಯೊಂದು ಕರಾರನ್ನು ಮಂಡಲಿಯ ಪರವಾಗಿ ಆಯುಕ್ತರು ಮಾಡಿಕೊಳ್ಳತಕ್ಕದ್ದು:

ಪರಂತು, ಐದು ಲಕ್ಷ ರೂಪಾಯಿ ಅಥವಾ ಅದಕ್ಕೂ ಹೆಚ್ಚು ವೆಚ್ಚವನ್ನೊಳಗೊಳ್ಳುವ ಯಾವ ಕರಾರನ್ನೂ ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿ ಇಲ್ಲದೆ ಮಾಡಿಕೊಳ್ಳತಕ್ಕದ್ದಲ್ಲ.

(ಬಿ) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ಈ ಸಂಬಂಧವಾಗಿ ನಿಯಮಿಸಬಹುದಾದಂಥ ಷರತ್ತುಗಳಿಗೊಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ ಕಾಲಕಾಲಕ್ಕೆ ಅಗತ್ಯವಾಗುವ ಯಾವುದೇ ಮೊಬಲಗನ್ನು ಸಾಲವಾಗಿ ಪಡೆಯಲು;

(ಸಿ) 42ನೇ ಪ್ರಕರಣಕ್ಕೆ ಒಳಪಟ್ಟು ಮತ್ತು ನಿಯಮಿಸಬಹುದಾದಂಥ ನಿರ್ಬಂಧಗಳು, ಷರತ್ತುಗಳು ಮತ್ತು ಪರಿಮಿತಿಗಳಿಗೆ ಒಳಪಟ್ಟು ತನಗೆ ಸೇರಿದ ಚರ ಅಥವಾ ಸ್ಥಿರ ಸ್ವತ್ತನ್ನು ಗುತ್ತಿಗೆ, ಮಾರಾಟ ಅಥವಾ ಇತರ ರೀತಿಯಲ್ಲಿ ವರ್ಗಾವಣೆ ಮಾಡಲು ಮತ್ತು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಅಭಿವೃದ್ಧಿ ಯೋಜನೆಯ ಉದ್ದೇಶಕ್ಕಾಗಿ ತನ್ನಲ್ಲಿ ನಿಹಿತವಾಗಿರುವ ಅಥವಾ ತಾನು ಆರ್ಜಿಸಿದ್ದ ಯಾವುದೇ ಭೂಮಿಯನ್ನು, ಮೈದಾನಗಳನ್ನು ರೂಪಿಸುವ ಅಥವಾ ಕಟ್ಟಡ ನಿರ್ಮಿಸುವ ಉದ್ದೇಶಗಳಿಗಾಗಿ ಅಥವಾ ಯಾವುದೇ ಇತರ ರೀತಿಯಲ್ಲಿ ವಿನಿಯೋಗಿಸಲು ಅಥವಾ ಬಳಸಲು,

- ಅಧಿಕಾರ ಹೊಂದಿರತಕ್ಕದ್ದು.

**9. ಮಂಡಳಿಯ ಉಪ-ಸಮಿತಿ.-** (1) ಮಂಡಳಿಯು ಯಾವುದೇ ನಿರ್ದಿಷ್ಟ ಉದ್ದೇಶಕ್ಕಾಗಿ, ಆಯುಕ್ತರು ಅಧ್ಯಕ್ಷರಾಗಿರುವ ಮತ್ತು ಪ್ರತಿಯೊಂದು ಸಮಿತಿಗೆ ಐವರಿಗೆ ಮೀರದಂತೆ ಇತರ ಸದಸ್ಯರಿರುವ ಒಂದು ಅಥವಾ ಹೆಚ್ಚಿನ ಉಪ-ಸಮಿತಿಗಳನ್ನು ರಚಿಸಬಹುದು.

(2) ಉಪ-ಸಮಿತಿಗಳು, ಮಂಡಳಿಯು ಪ್ರತ್ಯಾಯೋಜಿಸಿದಂಥ ಮಂಡಳಿಯ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

(3) ಪ್ರತಿಯೊಂದು ಉಪ-ಸಮಿತಿಯು ತಿಂಗಳಿಗೆ ಕನಿಷ್ಠಪಕ್ಷ ಒಂದು ಸಲವಾದರೂ ಸಭೆ ಸೇರತಕ್ಕದ್ದು ಮತ್ತು ವಿನಿಯಮಗಳಿಂದ ಉಪಬಂಧಿಸಬಹುದಾದಂತೆ ಅದರ ಸಭೆಯ ಕಾರ್ಯಕಲಾಪಗಳಿಗೆ ಸಂಬಂಧಿಸಿದ ಅಂಥ ಪ್ರಕ್ರಿಯಾ ನಿಯಮಗಳನ್ನು ಪಾಲಿಸತಕ್ಕದ್ದು.

**10. ಆಯುಕ್ತರ ನೇಮಕಾತಿ.-** (1) ಸರ್ಕಾರವು, ಸರ್ಕಾರದ ಉಪ ಕಾರ್ಯದರ್ಶಿಯ ದರ್ಜೆಗೆ ಕಡಿಮೆಯಲ್ಲದ ದರ್ಜೆಯ ಅಧಿಕಾರಿಯನ್ನು ಮಂಡಳಿಯ ಆಯುಕ್ತರಾಗಿ ನೇಮಿಸತಕ್ಕದ್ದು;

(2) ಆಯುಕ್ತರು, ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ವೇತನ ಮತ್ತು ಇತರ ಭತ್ಯಗಳನ್ನು ಪಡೆಯತಕ್ಕದ್ದು.

(3) ರಾಜ್ಯ ಸರ್ಕಾರವು, ಕಾಲಕಾಲಕ್ಕೆ ತಾನು ಯುಕ್ತವೆಂದು ಭಾವಿಸುವಂಥ ಅವಧಿಗೆ ಆಯುಕ್ತರಿಗೆ ರಜೆಯನ್ನು ಮಂಜೂರು ಮಾಡಬಹುದು.

**11. ಆಯುಕ್ತರ ಅಧಿಕಾರಗಳು ಮತ್ತು ಕರ್ತವ್ಯಗಳು.-** (1) ಆಯುಕ್ತರು, ಮಂಡಳಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಆಡಳಿತಾಧಿಕಾರಿಯಾಗಿರತಕ್ಕದ್ದು.

(2) ಆಯುಕ್ತರು, ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ತನಗೆ ಪ್ರದತ್ತವಾಗಿರುವಂಥ ಪ್ರಕಾರ್ಯಗಳನ್ನು ನೆರವೇರಿಸುವುದರ ಜೊತೆಗೆ,-

(ಎ) ಮಂಡಳಿಯ ನಿರ್ಣಯಗಳನ್ನು ಕಾರ್ಯಗತಗೊಳಿಸತಕ್ಕದ್ದು;

(ಬಿ) ಮಂಡಳಿಯ ವ್ಯವಹಾರಗಳನ್ನು ನಿರ್ವಹಿಸಿಕೊಂಡು ಬರತಕ್ಕದ್ದು ಮತ್ತು ಪತ್ರ ವ್ಯವಹಾರವನ್ನು ನಡೆಸಿಕೊಂಡು ಬರತಕ್ಕದ್ದು;

(ಸಿ) ಸರ್ಕಾರವು ನಿರ್ದೇಶಿಸಬಹುದಾದಂಥ ಯೋಜನೆಗಳನ್ನು ಮತ್ತು ಕಾಮಗಾರಿಗಳನ್ನು ನೆರವೇರಿಸಿ ಕಾರ್ಯಗತಗೊಳಿಸತಕ್ಕದ್ದು ಮತ್ತು ಆ ಬಗ್ಗೆ ಅವಶ್ಯವಾಗುವ ವೆಚ್ಚಗಳನ್ನು ಮಾಡತಕ್ಕದ್ದು;

(ಡಿ) ಮಂಡಳಿಯ ಯೋಜನೆಗಳ ಅನುಷ್ಠಾನಕ್ಕೆ ಜವಾಬ್ದಾರರಾಗಿರತಕ್ಕದ್ದು;

(ಇ) ಮಂಡಳಿಯ ಬ್ಯಾಂಕ್ ಖಾತೆಗಳಲ್ಲಿ ವ್ಯವಹಾರ ನಡೆಸತಕ್ಕದ್ದು ಮತ್ತು ಮಂಡಲಿಯ ಲೆಕ್ಕಪತ್ರಗಳನ್ನು ನಿರ್ವಹಿಸಲು ಜವಾಬ್ದಾರರಾಗಿರತಕ್ಕದ್ದು;

(ಎಫ್) ಮಂಡಳಿಯ ಅಧಿಕಾರಿಗಳು ಮತ್ತು ನೌಕರರ ಮೇಲೆ, ಕಾರ್ಯನಿರ್ವಹಣೆ, ಆಡಳಿತ ವಿಷಯಗಳು ಮತ್ತು ಅಂಥ ಅಧಿಕಾರಿಗಳು ಮತ್ತು ನೌಕರರ ಸೇವಾ ವಿಷಯಗಳು ಹಾಗೂ ಅವರ ವೇತನ ಮತ್ತು ಭತ್ಯಗಳನ್ನು ವಿನಿಯಮನಗೊಳಿಸುವ ಬಗ್ಗೆ ಮೇಲ್ವಿಚಾರಣೆ ಹಾಗೂ ನಿಯಂತ್ರಣವನ್ನು ಹೊಂದಿರತಕ್ಕದ್ದು.

(ಜಿ) ಮಂಡಳಿಯ ನಡವಳಿಗಳ ಸಂಕ್ಷಿಪ್ತ ಟಿಪ್ಪಣಿಗಳ ಮತ್ತು ಯಾವುದೇ ವಿವರಪತ್ರದ ಪ್ರತಿಯನ್ನು ಅಥವಾ ರಾಜ್ಯ ಸರ್ಕಾರವು ಕಾಲಕಾಲಕ್ಕೆ ಕೋರಬಹುದಾದ ಇತರ ಮಾಹಿತಿಯನ್ನು ರಾಜ್ಯ ಸರ್ಕಾರಕ್ಕೆ ಒದಗಿಸತಕ್ಕದ್ದು.

(ಎಚ್) ಈ ಅಧಿನಿಯಮದ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನ ಮೂಲಕ ಅಥವಾ ಅದರಡಿಯಲ್ಲಿ ತನಗೆ ಪ್ರದತ್ತವಾಗುವಂಥ ಇತರ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

**12. ಮಂಡಳಿಯ ನೌಕರರು.-** (1) ನಿಯಮಿಸಬಹುದಾದಂಥ ನಿಯಮಗಳಿಗೊಳಪಟ್ಟು, ಮಂಡಳಿಯು, ಅಧಿನಿಯಮದ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಅದು ಅವಶ್ಯಕವೆಂದು ಭಾವಿಸುವಂಥ ಸಂಖ್ಯೆಯ ನೌಕರರನ್ನು ನೇಮಕ ಮಾಡಿಕೊಳ್ಳಬಹುದು:

ಪರಂತು, ರಾಜ್ಯ ಸರ್ಕಾರವು ಭಾರತೀಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ ಸೇವೆಯಿಂದ ಅಥವಾ ಕರ್ನಾಟಕ ರಾಜ್ಯ ಲೆಕ್ಕಪತ್ರ ಸೇವೆಯಿಂದ "ಎ" ಗುಂಪಿನ ಕಿರಿಯ ವೇತನ ಶ್ರೇಣಿಯ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಅಧಿಕಾರಿಯನ್ನು ಪ್ರತಿನಿಯೋಜನೆಯ ಮೇಲೆ ಹಣಕಾಸು ಮತ್ತು ಲೆಕ್ಕಪತ್ರ ನಿಯಂತ್ರಣಾಧಿಕಾರಿಯಾಗಿ ನೇಮಕ ಮಾಡತಕ್ಕದ್ದು.

(2) ಹಣಕಾಸು ಮತ್ತು ಲೆಕ್ಕಪತ್ರ ನಿಯಂತ್ರಣಾಧಿಕಾರಿಯು ಆಯುಕ್ತನಿಗೆ ವರದಿ ಸಲ್ಲಿಸತಕ್ಕದ್ದು ಮತ್ತು ಅವನು ಹಣಕಾಸು ನಿಯಮಗಳನ್ನು ಪಾಲಿಸಿಕೊಂಡು ಬರುವಂತೆ ಹಾಗೂ ಮಂಡಳಿಯ ಹಣಕಾಸು ವ್ಯವಹಾರಗಳ ಬಗ್ಗೆ ವಾಸ್ತವಿಕವಾದ ಹಾಗೂ ನ್ಯಾಯವಾದ ಚಿತ್ರಣವನ್ನು ನೀಡುವಂತೆ ಲೆಕ್ಕಪತ್ರಗಳನ್ನು ಅಂದಂದಿನವರೆಗೆ ನಿರ್ವಹಿಸಿಕೊಂಡು ಬರುವಂತೆ ನೋಡಿಕೊಳ್ಳತಕ್ಕದ್ದು;

(3) (1)ನೇ ಉಪ-ಪ್ರಕರಣದಲ್ಲಿ ಉಲ್ಲೇಖಿಸಲಾದ ನೌಕರರ ವೇತನಗಳು, ಭತ್ಯಗಳು ಮತ್ತು ಇತರ ಸೇವಾ ಷರತ್ತುಗಳು ನಿಯಮಿಸಬಹುದಾದಂತಿರತಕ್ಕದ್ದು.

(4) ಆಯುಕ್ತರು, ಮಂಡಳಿಯ ನೌಕರರಿಗೆ ಸಂಬಂಧಿಸಿದಂತೆ ನೇಮಕಾತಿ ಅಧಿಕಾರಿಯಾಗಿರತಕ್ಕದ್ದು ಮತ್ತು ಮಂಡಳಿಯ ಸಿಬ್ಬಂದಿಯ ಮೇಲೆ ಸಾಮಾನ್ಯ ನಿಯಂತ್ರಣ ಮತ್ತು ಮೇಲ್ವಿಚಾರಣೆಯನ್ನು ಹೊಂದಿರತಕ್ಕದ್ದು.

**13. ಮಂಡಳಿಯ ಅಡಿಯಲ್ಲಿನ ಸೇವೆಗೆ ಸಾಮಾನ್ಯ ಅನರ್ಹತೆಗಳು.-** ಯಾವ ವ್ಯಕ್ತಿಯೂ, ಮಂಡಳಿಯ ಅಧಿಕಾರಿ ಅಥವಾ ನೌಕರನಾಗಿ ಅಲ್ಲದೆ, ಖುದ್ದಾಗಿ ಅಥವಾ ತನ್ನ ಪಾಲುದಾರನ ಮೂಲಕ ಅಥವಾ ತನ್ನ ಏಜಂಟನ ಮೂಲಕ ಮಂಡಳಿಯ ಯಾವುದೇ ಷೇರನ್ನು ಅಥವಾ ಮಂಡಳಿಯು ಮಾಡಿಕೊಂಡ ಇಲ್ಲವೇ ಅದರ ಪರವಾಗಿ ಮಾಡಿಕೊಂಡ ಯಾವುದೇ ಕರಾರಿನಲ್ಲಿ ಅಥವಾ ಮಂಡಳಿಯ ಅಡಿಯಲ್ಲಿನ ಯಾವುದೇ ನಿಯೋನೆಯಲ್ಲಿ ಹಿತಾಸಕ್ತಿಯನ್ನು ಹೊಂದಿದ್ದರೆ ಆತನು ಮಂಡಳಿಯ ಅಧಿಕಾರಿ ಅಥವಾ ಉದ್ಯೋಗಿಯಾಗತಕ್ಕದ್ದಲ್ಲ ಅಥವಾ ಆಗಿರತಕ್ಕದ್ದಲ್ಲ.

**14. ಮಂಡಳಿಯ ಸಭೆಗಳು.-** (1) ಆಯುಕ್ತರು ಅಧ್ಯಕ್ಷರ ಪೂರ್ವಾನುಮತಿಯೊಂದಿಗೆ ಮತ್ತು ಅಧ್ಯಕ್ಷರು ಯುಕ್ತವೆಂದು ಭಾವಿಸಬಹುದಾದಂಥ ಅವಧಿಗಳ ಅಂತರದಲ್ಲಿ ಮತ್ತು ಅಧ್ಯಕ್ಷರು ನಿರ್ಧರಿಸಬಹುದಾದಂಥ ಸ್ಥಳದಲ್ಲಿ ಮಂಡಲಿಯ ಸಭೆಗಳನ್ನು ನಡೆಸತಕ್ಕದ್ದು:

ಪರಂತು, ಮಂಡಳಿಯು ಒಂದು ಕ್ಯಾಲೆಂಡರ್ ವರ್ಷದಲ್ಲಿ ಕನಿಷ್ಠ ಪಕ್ಷ ಎರಡು ಬಾರಿಯಾದರೂ ಸಭೆ ಸೇರತಕ್ಕದ್ದು.

(2) ಪ್ರತಿಯೊಂದು ಸಭೆಯಲ್ಲೂ ಅಧ್ಯಕ್ಷರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಯಾವುದೇ ಕಾರಣದಿಂದಾಗಿ ಅಧ್ಯಕ್ಷರಿಗೆ ಯಾವುದೇ ಸಭೆಗೆ ಹಾಜರಾಗಲು ಸಾಧ್ಯವಾಗದಿದ್ದರೆ, ಸಭೆಯಲ್ಲಿ ಹಾಜರಿರುವ ಸದಸ್ಯರು ತಮ್ಮ ಪೈಕಿ ಆಯ್ಕೆ ಮಾಡುವಂಥ ಯಾವೊಬ್ಬ ಇತರ ಸದಸ್ಯ ಸಭೆಯ ಅಧ್ಯಕ್ಷತೆ ವಹಿಸತಕ್ಕದ್ದು.

(3) ಮಂಡಳಿಯ ತೀರ್ಮಾನಗಳನ್ನು, ಹಾಜರಿದ್ದು ಮತ ಹಾಕುವ ಸದಸ್ಯರ ಅವಿರೋಧ ಸಮ್ಮತಿಸೂಚಕ ಮತದ ಮೂಲಕ ಕೈಗೊಳ್ಳತಕ್ಕದ್ದು. ಮಂಡಲಿಯ ಮುಂದೆ ತೀರ್ಮಾನಕ್ಕಾಗಿ ಬಂದ, ಯಾವುದೇ ನಿರ್ದಿಷ್ಟ ವಿಷಯದ ಬಗ್ಗೆ ಯಾವುವೇ ಭಿನ್ನಾಭಿಪ್ರಾಯಗಳಿದ್ದಲ್ಲಿ, ಆಯುಕ್ತರು ಆ ವಿಷಯವನ್ನು ರಾಜ್ಯಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯಗಳ ಬಗ್ಗೆ ರಾಜ್ಯಸರ್ಕಾರದ ತೀರ್ಮಾನವು ಅಂತಿಮವಾಗಿರತಕ್ಕದ್ದು.

(4) ಆಯುಕ್ತನು ಮಂಡಳಿಯ ತೀರ್ಮಾನಗಳನ್ನು ಕಾರ್ಯಗತಗೊಳಿಸತಕ್ಕದ್ದು:

ಪರಂತು, ಮಂಡಳಿಯ ಯಾವುದೇ ನಿರ್ಣಯವು ಈ ಅಧಿನಿಯಮದ ಅಥವಾ ಯಾವುದೇ ಇತರ ಕಾನೂನಿನ ಉಪಬಂಧವನ್ನು ಅಥವಾ ಈ ಅಧಿನಿಯಮದ ಅಥವಾ ಇತರ ಯಾವುದೇ ಕಾನೂನಿನ ಅಡಿಯಲ್ಲಿ ರಚಿಸಲಾದ ಅಥವಾ ಹೊರಡಿಸಿದ ಯಾವುದೇ ನಿಯಮ ಅಥವಾ ಅಧಿಸೂಚನೆ ಅಥವಾ ವಿನಿಯಮಗಳ ಉಪಬಂಧಗಳನ್ನು ಅಥವಾ ರಾಜ್ಯಸರ್ಕಾರವು ಹೊರಡಿಸಿದ ಯಾವುದೇ ಆದೇಶವನ್ನು ಉಲ್ಲಂಘಿಸುತ್ತದೆಯೆಂದು ಅಥವಾ ಮಂಡಲಿಯ ಹಿತಾಸಕ್ತಿಗೆ ಅಥವಾ ಬಸವಕಲ್ಯಾಣ ಕ್ಷೇತ್ರದ ಅಭಿವೃದ್ಧಿ ಮತ್ತು ನಿರ್ವಹಣೆಗೆ ಧಕ್ಕೆ ಉಂಟುಮಾಡುತ್ತದೆ ಅಥವಾ ಹಾನಿಕರವಾಗುತ್ತದೆಂದು ಆಯುಕ್ತರು ಭಾವಿಸಿದರೆ, ಅವರು ನಿರ್ಣಯವನ್ನು ಅನುಮೋದಿಸಲಾದ ಹದಿನೈದು ದಿನಗಳ ಒಳಗಾಗಿ, ವಿಷಯದ ಬಗ್ಗೆ ಆದೇಶಗಳನ್ನು ಕೋರಿ ರಾಜ್ಯ ಸರ್ಕಾರಕ್ಕೆ ಕಳುಹಿಸಿಕೊಡತಕ್ಕದ್ದು ಮತ್ತು ಮಂಡಳಿಯ ಮುಂದಿನ ಸಭೆಯಲ್ಲಿ ತಾನು ಕೈಗೊಂಡ ಕ್ರಮದ ಬಗ್ಗೆ ಮಂಡಳಿಗೆ ತಿಳಿಸತಕ್ಕದ್ದು ಮತ್ತು ಆಯುಕ್ತರು ಕಳುಹಿಸಿಕೊಟ್ಟ ಅಂಥ ವಿಷಯದ ಬಗ್ಗೆ ರಾಜ್ಯ ಸರ್ಕಾರವು ಆದೇಶವನ್ನು ನೀಡುವವರೆಗೆ, ಆಯುಕ್ತರು ಆ ನಿರ್ಣಯವನ್ನು ಜಾರಿಗೆ ತರಲು ಬದ್ಧರಲ್ಲ.

(5) ಮಂಡಳಿಯು, ವಿನಿಯಮಗಳ ಮೂಲಕ ತನ್ನ ಸಭೆಗಳ ಕಾರ್ಯಕಲಾಪಗಳಿಗೆ ಸಂಬಂಧಪಟ್ಟಂತೆ ಈ ಅಧಿನಿಯಮದ ಉಪಬಂಧಗಳಿಗೆ ಮತ್ತು ನಿಯಮಗಳಿಗೆ ಅಸಂಗತವಾಗದಂತಹ, ಕಾರ್ಯವಿಧಾನಗಳನ್ನು ಗೊತ್ತುಪಡಿಸಬಹುದು.

**15. ವ್ಯವಹರಣೆಗಳು ಸರಿಯಾದುದೆಂದು ಮತ್ತು ಊರ್ಜಿತವಾದುದೆಂದು ಪೂರ್ವಭಾವನೆ ಮಾಡುವುದು.-** ಅಧ್ಯಕ್ಷರಾಗಿ ಅಥವಾ ಸದಸ್ಯರಾಗಿ ಕಾರ್ಯನಿರ್ವಹಿಸುವ ಯಾವೊಬ್ಬ ವ್ಯಕ್ತಿಯ ಅನರ್ಹತೆ ಅಥವಾ ನೇಮಕಾತಿಯಲ್ಲಿನ ನ್ಯೂನತೆಯು, ಮಂಡಳಿಯ ಯಾವುದೇ ಕೃತ್ಯ ಅಥವಾ ನಡವಳಿಯು ಅನ್ಯಥಾ ಈ ಅಧಿನಿಯಮದ ಉಪಬಂಧಗಳಿಗೆ ಅನುಸಾರವಾಗಿದ್ದರೆ, ಅಂಥ ಕೃತ್ಯ ಅಥವಾ ವ್ಯವಹರಣೆಯನ್ನು ದೂಷಿತಗೊಳಿಸುತ್ತದೆಯೆಂದು ಭಾವಿಸತಕ್ಕದ್ದಲ್ಲ.

**16. ಸುತ್ತೋಲೆಯ ಮೂಲಕ ಮಂಡಳಿಯ ತೀರ್ಮಾನಗಳನ್ನು ಸೂಚಿಸುವುದು.- (1)** ಅಧ್ಯಕ್ಷನು, ಯಾವುದೇ ಪ್ರಕರಣವನ್ನು ಮಂಡಳಿಯ ಒಂದು ಸಭೆಯಲ್ಲಿ ಚರ್ಚೆಗೆ ತರುವುದಕ್ಕೆ ಬದಲಾಗಿ, ಆ ಬಗ್ಗೆ ಅವರ ಅಭಿಪ್ರಾಯ ಕೋರಿ ನಿಯಮಿಸಲಾದ ನಮೂನೆಯಲ್ಲಿ ಒಂದು ಟಿಪ್ಪಣಿಯನ್ನು ಮಂಡಳಿಯ ಸದಸ್ಯರ ನಡುವೆ ಪರಿಚಲನೆ ಮಾಡಿಸಲು ನಿರ್ದೇಶಿಸಬಹುದು. ಹಾಗೆ ಪರಿಚಲನೆ ಮಾಡಲಾದ ಟಿಪ್ಪಣಿಯಲ್ಲಿರುವ ಪ್ರಸ್ತಾವವನ್ನು ಎಲ್ಲ ಸದಸ್ಯರು ಅವಿರೋಧವಾಗಿ ಅನುಮೋದಿಸಿದರೆ ಅದನ್ನು ಮಂಡಳಿಯ ಸಮ್ಮತಿಸೂಚಕ ನಿರ್ಣಯವೆಂಬುದಾಗಿ ಭಾವಿಸತಕ್ಕದ್ದು ಮತ್ತು ತದನುಸಾರವಾಗಿ ಮುಂದಿನ ಕ್ರಮ ಕೈಗೊಳ್ಳತಕ್ಕದ್ದು. ಮಂಡಲಿಯ ತೀರ್ಮಾನಕ್ಕಾಗಿ ಪರಿಚಲನೆ ಮಾಡಲಾದ ಯಾವುದೇ ನಿರ್ದಿಷ್ಟ ವಿಷಯದ ಬಗ್ಗೆ ಯಾವುದೇ ಭಿನ್ನಾಭಿಪ್ರಾಯ ವ್ಯಕ್ತವಾದರೆ ಆಯುಕ್ತರು ಆ ವಿಷಯವನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಆ ಬಗ್ಗೆ ರಾಜ್ಯಸರ್ಕಾರದ ತೀರ್ಮಾನವು ಅಂತಿಮವಾಗಿರತಕ್ಕದ್ದು.

(2) (1)ನೇ ಉಪ-ಪ್ರಕರಣದ ಅಡಿಯಲ್ಲಿ ಅಭಿಪ್ರಾಯಕ್ಕಾಗಿ ಪರಿಚಲನೆ ಮಾಡಲಾದ ಸಂದರ್ಭಗಳಲ್ಲಿ ಯಾವೊಬ್ಬ ಸದಸ್ಯರು ಟಿಪ್ಪಣಿಯಲ್ಲಿ ನಿರ್ದಿಷ್ಟಪಡಿಸಿರುವ ದಿನಾಂಕದೊಳಗೆ ತಮ್ಮ ಅಭಿಪ್ರಾಯವನ್ನು ತಿಳಿಸಲು ತಪ್ಪಿದರೆ, ಅಂಥ ಸದಸ್ಯರು ಸುತ್ತೋಲೆ ಕಳುಹಿಸಲಾದ ಟಿಪ್ಪಣಿಯಲ್ಲಿ ಒಳಗೊಂಡ ಪ್ರಸ್ತಾವವನ್ನು ಒಪ್ಪಿಕೊಂಡಿದ್ದಾರೆಂದು ಭಾವಿಸತಕ್ಕದ್ದು.

(3) 14ನೇ ಪ್ರಕರಣದ ಉಪಬಂಧಗಳು ಯಥೋಚಿತ ವ್ಯತ್ಯಾಸಗಳೊಂದಿಗೆ ಈ ಪ್ರಕರಣದ ಅಡಿಯಲ್ಲಿ ಪರಿಚಲನೆ ಮೂಲಕ ಕೈಗೊಂಡ, ಮಂಡಳಿಯ ತೀರ್ಮಾನಗಳಿಗೆ ಅನ್ವಯವಾಗತಕ್ಕದ್ದು.

**17. ಕೆಲವೊಂದು ತೀರ್ಮಾನಗಳನ್ನು ಕೈಗೊಳ್ಳಲು ಅಧ್ಯಕ್ಷರ ಅಧಿಕಾರ.-**(1) ಯಾವೊಂದು ವಿಷಯವು, 14ನೇ ಪ್ರಕರಣದ ಅಡಿಯಲ್ಲಿ ಮಂಡಳಿಯ ಸಭೆ ಕರೆಯಲು ಅಗತ್ಯಪಡಿಸುವಷ್ಟು ಅಥವಾ 16ನೇ ಪ್ರಕರಣದ ಅಡಿಯಲ್ಲಿ ಸುತ್ತೋಲೆಯ ಮೂಲಕ ಮಂಡಳಿಯು ತೀರ್ಮಾನಿಸುವವರೆಗೂ ಕಾಯಲು ಸಾಧ್ಯವಾಗದಷ್ಟು ತುರ್ತು ಸ್ವರೂಪದ್ದಾಗಿದೆಯೆಂದು ಅಥವಾ ವಿಷಯವು ಗಹನವಾದುದಲ್ಲವೆಂದು ಅಧ್ಯಕ್ಷರು ಅಭಿಪ್ರಾಯಪಟ್ಟಲ್ಲಿ, ಅವರು ತಾವು ಯುಕ್ತವೆಂದು ಭಾವಿಸುವಂಥ ಆದೇಶಗಳನ್ನು ನೀಡಬಹುದು ಮತ್ತು ಅದನ್ನು ಮಂಡಳಿಯ ತೀರ್ಮಾನಗಳ ರೀತಿಯಲ್ಲಿಯೇ ಅನುಷ್ಠಾನಗೊಳಿಸತಕ್ಕದ್ದು:

ಪರಂತು ಅಧ್ಯಕ್ಷರು ಈ ಪ್ರಕರಣದ ಅಡಿಯಲ್ಲಿ ಕೈಗೊಂಡ ಪ್ರತಿಯೊಂದು ತೀರ್ಮಾನವನ್ನು ಮಂಡಳಿಯ ಮುಂದಿನ ಸಭೆಯಲ್ಲಿ ಮಂಡಿಸತಕ್ಕದ್ದು.

## ಅಧ್ಯಾಯ III

## ಬಸವ ಕಲ್ಯಾಣ ಕ್ಷೇತ್ರದ ಅಭಿವೃದ್ಧಿ ಮತ್ತು ನಿರ್ವಹಣೆ

**18. ಬಸವಕಲ್ಯಾಣದಲ್ಲಿನ ಪರಂಪರೆಯ ತಾಣಗಳನ್ನು ಮಂಡಳಿಯಲ್ಲಿ ನಿಹಿತಗೊಳಿಸುವುದು.-** (1) ಯಾವುದೇ ಪದ್ಧತಿ, ಸಂಪ್ರದಾಯ, ರೂಢಿಯಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ಸೃಜಿಸಲಾದ ಮತ್ತು ಅಸ್ತಿತ್ವದಲ್ಲಿರುವ ನ್ಯಾಸದ ನಿಬಂಧನೆಗಳಲ್ಲಿ ಏನೇ ಇದ್ದರೂ, ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಬಸವಕಲ್ಯಾಣದಲ್ಲಿರುವ ಎಲ್ಲಾ ಅಥವಾ ಯಾವುವೇ ಪರಂಪರೆಯ ತಾಣಗಳ ಸಂಪೂರ್ಣ ನಿಯಂತ್ರಣ, ಆಡಳಿತ ವ್ಯವಸ್ಥೆ

ಮತ್ತು ಮೇಲ್ವಿಚಾರಣೆಯು ರಾಜ್ಯ ಸರ್ಕಾರದಲ್ಲಿ ನಿಹಿತವಾಗತಕ್ಕದ್ದು ಮತ್ತು ಆ ತರುವಾಯ ರಾಜ್ಯಸರ್ಕಾರವು ಅಧಿಸೂಚಿಸಿದ ದಿನಾಂಕದಿಂದ ಅದು ಮಂಡಳಿಗೆ ವರ್ಗಾವಣೆಯಾಗತಕ್ಕದ್ದು.

(2) ರಾಜ್ಯ ಸರ್ಕಾರವು ತಾತ್ಕಾಲಿಕ ಉಪಬಂಧಗಳನ್ನು ಕಲ್ಪಿಸುವುದು ಅವಶ್ಯವೆಂದು ಭಾವಿಸಿದರೆ, ಅದು ಸಾಮಾನ್ಯ ಅಥವಾ ವಿಶೇಷ ಆದೇಶದ ಮೂಲಕ ತಾತ್ಕಾಲಿಕ ಉಪಬಂಧಗಳನ್ನು ರಚಿಸಬಹುದು.

**19. ಅನುಸೂಚಿಯ ತಿದ್ದುಪಡಿಗೆ ಅಧಿಕಾರ.**- ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ, ನಿಯಮಿಸಬಹುದಾದಂಥ ಕಾರ್ಯವಿಧಾನವನ್ನು ಅನುಸರಿಸಿದ ತರುವಾಯ ಅನುಸೂಚಿಯಲ್ಲಿ ಯಾವುದೇ ನಮೂದನ್ನು ಸೇರಿಸಿ ಅಥವಾ ಮಾರ್ಪಡಿಸಿ ಅದನ್ನು ತಿದ್ದುಪಡಿಮಾಡಬಹುದು.

**20. ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸುವುದು, ಅದರ ಅನುಮೋದನೆ ಹಾಗೂ ಅದನ್ನು ಕಾರ್ಯಗತ ಗೊಳಿಸುವುದು.**- (1) ಮಂಡಳಿಯು, ಅದರ ರಚನೆಯಾದ ಮೇಲೆ, ಆದಷ್ಟು ಬೇಗನೆ ಬಸವಕಲ್ಯಾಣವನ್ನು ಅಂತಾರಾಷ್ಟ್ರೀಯ ಯಾತ್ರಾ ಸ್ಥಳವನ್ನಾಗಿ ಮತ್ತು ಸಾಂಸ್ಕೃತಿಕ ಹಾಗೂ ಪ್ರವಾಸಿ ಕೇಂದ್ರವನ್ನಾಗಿ ಮತ್ತು ಜಗಜ್ಯೋತಿ ಶ್ರೀ ಬಸವೇಶ್ವರರ, ಅವರ ಸಮಕಾಲೀನರ ಮತ್ತು ಶಿಷ್ಯರ ವಚನ-ಸಿದ್ಧಾಂತಗಳ ಚಿಂತನ ಹಾಗೂ ಪ್ರಚಾರದ ಕೇಂದ್ರವನ್ನಾಗಿ ಮಾಡಿ ಅಭಿವೃದ್ಧಿಗೊಳಿಸಲು ಯೋಜನೆಯನ್ನು ಸಿದ್ಧಪಡಿಸತಕ್ಕದ್ದು. ಅಭಿವೃದ್ಧಿ ಯೋಜನೆಯು ಈ ಮುಂದಿನವುಗಳನ್ನು ಒಳಗೊಂಡಿರಬಹುದು, ಎಂದರೆ:-

(ಎ) ಯಾವುದೇ ಪರಂಪರೆ ತಾಣದ ಅಥವಾ ನಿರ್ಮಿತಿಯ ಮರುಜೋಡಣೆ ನಿರ್ಮಾಣ ಮತ್ತು ಅದರ ನಿರ್ವಹಣೆಗಾಗಿ ಕಾರ್ಯಕ್ರಮಗಳು;

(ಬಿ) ಮಂಡಳಿಯ ಅಭಿಪ್ರಾಯದಲ್ಲಿ ಅಭಿವೃದ್ಧಿ ಯೋಜನೆಯನ್ನು ಕಾರ್ಯಗತಗೊಳಿಸಲು ಅವಶ್ಯವಾದ ಭೂಮಿಯನ್ನು, ಭೂಸ್ವಾಧೀನ ಅಥವಾ ಖರೀದಿ ಅಥವಾ ವಿನಿಮಯದ ಮೂಲಕ ಅಥವಾ ಅನ್ಯಥಾ ಆರ್ಜಿಸುವುದಕ್ಕಾಗಿ ಪ್ರಸ್ತಾವಗಳು;

(ಸಿ) ಸಾರ್ವಜನಿಕ ಉದ್ಯಾನವನಗಳು, ಫಲಪುಷ್ಪ ತೋಟಗಳು ಅಥವಾ ಮೃಗಾಲಯಗಳು, ಕಾರಂಜಿ ಬನಗಳು, ಕೃತಕ ಜಲಪಾತಗಳು, ವನ್ಯಮೃಗ ಉದ್ಯಾನವನಗಳು, ದೋಣಿ ವಿಹಾರ ಅಥವಾ ಇತರ ಜಲ ಕ್ರೀಡಾ ಸೌಲಭ್ಯವಿರುವ ಸರೋವರಗಳನ್ನು ಅಥವಾ ಇಂಥವೇ ಪ್ರವಾಸಿಗಳಿಗೆ ಆಕರ್ಷಣೆಯನ್ನುಂಟು ಮಾಡುವಂಥ ಇತರ ಕೇಂದ್ರಗಳನ್ನು ನಿರ್ಮಿಸುವುದು;

(ಡಿ) ವಿವಿಧ ವರ್ಗದ ಪ್ರವಾಸಿಗರ ಅವಶ್ಯಕತೆ ಪೂರೈಸಲು ಛತ್ರಗಳು, ವಸತಿ-ಗೃಹಗಳು, ಕುಠೀರಗಳು, ಹೋಟೆಲುಗಳು, ರೆಸ್ಟೋರಾಗಳು ಮತ್ತು ಭೋಜನಾಲಯಗಳನ್ನು ನಿರ್ಮಿಸುವುದು;

(ಇ) ಅವಶ್ಯಕ ಸಾಲು ಅಂಗಡಿಗಳನ್ನು ಅಥವಾ ವಾಣಿಜ್ಯ-ಸಂಕೀರ್ಣಗಳನ್ನು ನಿರ್ಮಿಸುವುದು;

(ಎಫ್) ಅನುಭವ ಮಂಟಪದ ಮಾದರಿಯಲ್ಲಿ ಒಂದು ಸಭಾಂಗಣವನ್ನು ನಿರ್ಮಿಸುವುದು;

(ಜಿ) ಆಯಕಟ್ಟಿನ ಸ್ಥಳಗಳಲ್ಲಿ ಪ್ರಾರ್ಥನಾ ಮಂದಿರಗಳ ಮತ್ತು ಧ್ಯಾನ ಮಂದಿರಗಳ ನಿರ್ಮಾಣ;

(ಎಚ್) 2ನೇ ಪ್ರಕರಣದಲ್ಲಿ ಪರಿಭಾಷಿಸಲಾದಂತೆ ಸೌಕರ್ಯಗಳನ್ನು ಕಲ್ಪಿಸುವುದು;

(ಐ) ಕಟ್ಟಡಗಳ ನಿರ್ಮಾಣ ಹಾಗೂ ಪುನರ್-ನಿರ್ಮಾಣವೂ ಸೇರಿದಂತೆ ಎಲ್ಲಾ ಅಥವಾ ಯಾವುದೇ ಭೂಮಿಯ ವಿನ್ಯಾಸ ಮತ್ತು ಮರು ವಿನ್ಯಾಸ;

(ಜೆ) ಚರಂಡಿ ವ್ಯವಸ್ಥೆ, ವಿದ್ಯುಚ್ಛಕ್ತಿ ಮತ್ತು ನೀರು ಪೂರೈಕೆ ಮತ್ತು ನೈರ್ಮಲ್ಯ ವ್ಯವಸ್ಥೆಯನ್ನು ಒದಗಿಸುವುದು;

(ಕೆ) ಮಂಡಳಿಯು, ಸಾಧಾರಣವಾಗಿ ತನ್ನ ಯೋಜನಾ ಕಾರ್ಯಕ್ಕೆ ಅನುಕೂಲವಾಗುವಂತೆ ಮತ್ತು ಮುಖ್ಯವಾಗಿ ಉತ್ತಮ ನೀರು ಹರಿವಿನ ವ್ಯವಸ್ಥೆಯನ್ನು ಒದಗಿಸಲು, ಯಾವುದೇ ಭೂಮಿಯನ್ನು ಎತ್ತರಿಸುವುದು ಸೂಕ್ತವೆಂದು ಭಾವಿಸಿದರೆ ಅಂಥ ಭೂಮಿಯನ್ನು ಎತ್ತರಿಸುವುದು;

(ಎಲ್) ಬಸವ ಕಲ್ಯಾಣ ಪ್ರದೇಶದಲ್ಲಿ ಅಥವಾ ಅದಕ್ಕೆ ಲಗತ್ತಾಗಿರುವ ಪ್ರದೇಶದಲ್ಲಿ ಉತ್ತಮ ಗಾಳಿ-ಬೆಳಕು ದೊರಕುವಂತೆ ಖಾಲಿ ಜಾಗಗಳನ್ನು ಬಿಡುವುದು;

(ಎಮ್) ಜನರ ವಾಸಕ್ಕೆ ಯೋಗ್ಯವಲ್ಲದ ಹಾಗೂ ಅಭಿವೃದ್ಧಿ ಯೋಜನೆಗೆ ತಕ್ಕದಲ್ಲದ ಎಲ್ಲ ಕಟ್ಟಡಗಳನ್ನು ಕೆಡವುವುದು;

(ಎನ್) ಅಡಚಣೆಯನ್ನುಂಟುಮಾಡುವ ಕಟ್ಟಡಗಳನ್ನು ಅಥವಾ ಕಟ್ಟಡಗಳ ಭಾಗಗಳನ್ನು ಕೆಡವುವುದು;

(ಒ) ಕಟ್ಟಡಗಳ ನಿರ್ಮಾಣ ಮತ್ತು ಪುನರ್‌ನಿರ್ಮಾಣ, ಅವುಗಳ ನಿರ್ವಹಣೆ ಮತ್ತು ಸಂರಕ್ಷಣೆ;

(ಪಿ) 26ನೇ ಪ್ರಕರಣದಲ್ಲಿನ ಉಪಬಂಧಗಳಿಗೆ ಒಳಪಟ್ಟು, ಯೋಜನೆಯಲ್ಲಿ ಸೇರಿರುವ ಯಾವುದೇ ಸ್ವತ್ತನ್ನು ಮಾರಾಟ ಮಾಡುವುದು, ಬಾಡಿಗೆಗೆ ಕೊಡುವುದು, ಅಥವಾ ವಿನಿಮಯ ಮಾಡಿಕೊಳ್ಳುವುದು;

(ಕ್ಯು) ಮಂಡಲಿಯ ನೌಕರರಿಗೆ ವಸತಿ ಸೌಲಭ್ಯವನ್ನು ಒದಗಿಸುವುದು;

(ಆರ್) ಸಂಪರ್ಕ ಮತ್ತು ಸಾಗಣೆ ಸೌಲಭ್ಯಗಳನ್ನು ಒದಗಿಸುವುದು;

(ಎಸ್) ಅಭಿವೃದ್ಧಿ ಯೋಜನೆಯ ಭೌಗೋಳಿಕ ಪ್ರದೇಶದಲ್ಲಿ ಈಗಿರುವ ಮತ್ತು ಮುಂದುವರಿಸಲು ಅನುಮತಿಸಬಹುದಾದಂಥ ಮತೀಯ ಸಂಸ್ಥೆಗಳೊಂದಿಗೆ, ಅವು ಅಭಿವೃದ್ಧಿ ಯೋಜನೆಯ ಪರಿಕಲ್ಪನೆಗೆ ಸರಿಹೊಂದುತ್ತಿರುವವರೆಗೆ ಹೊಂದಾಣಿಕೆಗಳು ಮತ್ತು ಒಪ್ಪಂದಗಳನ್ನು ಮಾಡಿಕೊಳ್ಳುವುದು;

(ಟಿ) ಬಸವ ಕಲ್ಯಾಣವನ್ನು ಸಾಂಸ್ಕೃತಿಕ ಕೇಂದ್ರವನ್ನಾಗಿ, ಯಾತ್ರಾಸ್ಥಳವನ್ನಾಗಿ ಮತ್ತು ಅಂತಾರಾಷ್ಟ್ರೀಯ ಪ್ರವಾಸಿ ಕೇಂದ್ರವನ್ನಾಗಿ ಮಾಡುವ ಮತ್ತು ಜಗಜ್ಯೋತಿ ಶ್ರೀ ಬಸವೇಶ್ವರರ ವಚನ-ಸಿದ್ಧಾಂತಗಳ ಚಿಂತನ ಹಾಗೂ ಪ್ರಚಾರದ ಕೇಂದ್ರವನ್ನಾಗಿ ಮತ್ತು ಬಸವ ಧರ್ಮವನ್ನು, ಜಗಜ್ಯೋತಿ ಬಸವೇಶ್ವರರ ವಚನ ಸಾಹಿತ್ಯ ಮಾತ್ರವಲ್ಲದೆ, ಅವರ ಸಮಕಾಲೀನರ ಹಾಗೂ ಶಿಷ್ಯರ ವಚನ ಸಾಹಿತ್ಯವನ್ನು ಪ್ರಚಾರ ಮಾಡುವ ದೃಷ್ಟಿಯಿಂದ ಮತ್ತು ಜಗಜ್ಯೋತಿ ಶ್ರೀ ಬಸವೇಶ್ವರರ, ಅವರ ಸಮಕಾಲೀನರ ಮತ್ತು ಶಿಷ್ಯರ ಜೀವನ ಮತ್ತು ಧರ್ಮಕ್ಕೆ ಸಂಬಂಧಪಟ್ಟ ಇತರ ಮಹತ್ವದ ಸ್ಥಳಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ ಹಾಗೂ ಬಸವ ತತ್ವಗಳ ಅಧ್ಯಯನಕ್ಕಾಗಿ ಶೈಕ್ಷಣಿಕ ಮತ್ತು ಸಂಶೋಧನಾ ಕೇಂದ್ರದ ಮತ್ತು ಆ ವಿಷಯಕ್ಕೆ ಸಂಬಂಧಪಟ್ಟಂತೆ ವಿಶಿಷ್ಟ ಗ್ರಂಥಾಲಯದ ಸ್ಥಾಪನೆಗಾಗಿ, ಉಪಬಂಧಕಲ್ಪಿಸುವುದು ಯುಕ್ತ ಹಾಗೂ ಆನುಷಂಗಿಕವೆಂದು ಮಂಡಳಿಯು ಅಭಿಪ್ರಾಯಪಡುವಂಥ ಇತರ ಯಾವುವೇ ವಿಷಯಗಳು;

(ಯು) ಮಂಡಳಿಯ ಪ್ರಾದೇಶಿಕ ಪರಿಮಿತಿಯೊಳಗಿನ ಐತಿಹಾಸಿಕ ಮತ್ತು ಪರಂಪರೆಯ ಯಾವುದೇ ಸ್ಥಳದಲ್ಲಿ ಮಣ್ಣಿನಲ್ಲಿ ಹೂತು ಹೋಗಿವೆ ಎಂದು ನಂಬಲಾದ ಪ್ರಾಚೀನ ಸ್ಮಾರಕಗಳ ಯಾವುವಾದರೂ ಇದ್ದರೆ ಅವನ್ನು ಭೂಮಿಯಿಂದ ಹೊರಗೆ ತೆಗೆಯುವುದಕ್ಕಾಗಿ ಉತ್ಖನನ ಮತ್ತು ಪುರಾತತ್ವ ಸ್ವರೂಪದ ಅನ್ವೇಷಣೆ:

ಪರಂತು, ಈ ಖಂಡದಲ್ಲಿ ಒಳಗೊಂಡಿರುವುದು ಯಾವುದೂ ಪ್ರಾಚೀನ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳು ಮತ್ತು ಅವಶೇಷಗಳ ಅಧಿನಿಯಮ, 1958ರ (1958ರ ಕೇಂದ್ರ ಅಧಿನಿಯಮ, 24) ಉಪಬಂಧಗಳನ್ನು ಅಧ್ಯಾರೋಹಿಸುತ್ತದೆಂದು ಭಾವಿಸತಕ್ಕದ್ದಲ್ಲ.

(2) (1)ನೇ ಉಪ-ಪ್ರಕರಣದಡಿ ಸಿದ್ಧಪಡಿಸಲಾದ ಅಭಿವೃದ್ಧಿ ಯೋಜನೆಯನ್ನು ಆಯುಕ್ತರು ಅನುಮೋದನೆಗಾಗಿ ರಾಜ್ಯ ಸರ್ಕಾರಕ್ಕೆ ಕಳುಹಿಸಿಕೊಡತಕ್ಕದ್ದು. ರಾಜ್ಯ ಸರ್ಕಾರವು, ಮಾರ್ಪಾಟುಗಳ ಸಹಿತವಾಗಿ ಅಥವಾ ಯಾವುವೇ ಮಾರ್ಪಾಟುಗಳಿಲ್ಲದೆ ಯೋಜನೆಯನ್ನು ಅನುಮೋದಿಸಬಹುದು.

(3) (2)ನೇ ಉಪ-ಪ್ರಕರಣದಡಿ ಅಭಿವೃದ್ಧಿ ಯೋಜನೆಯನ್ನು ಅನುಮೋದಿಸಿದ ತರುವಾಯ, ರಾಜ್ಯ ಸರ್ಕಾರವು ಮಂಡಳಿಯ ಶಿಪಾರಸುಗಳ ಮೇಲೆ ಕಾಲ ಕಾಲಕ್ಕೆ ತಾನು ಅವಶ್ಯಕವೆಂದು ಭಾವಿಸುವಂಥ ಮಾರ್ಪಾಟುಗಳನ್ನು ಯೋಜನೆಯಲ್ಲಿ ಮಾಡಬಹುದು.

(4) ಈ ಪ್ರಕರಣದಡಿ ರಾಜ್ಯ ಸರ್ಕಾರವು ಅನುಮೋದಿಸಿದ ಅಭಿವೃದ್ಧಿ ಯೋಜನೆಗಳನ್ನು ಕಾರ್ಯಗತ ಗೊಳಿಸುವುದಕ್ಕಾಗಿ ಕಾಮಗಾರಿಗಳನ್ನು ಕೈಗೊಳ್ಳುವ ಮತ್ತು ವೆಚ್ಚವನ್ನು ಮಾಡುವ ಅಧಿಕಾರವನ್ನು ಮಂಡಳಿಯು ಹೊಂದಿರತಕ್ಕದ್ದು.

**21. ಬಸವ ಕಲ್ಯಾಣದ ನಿರ್ವಹಣೆ.-** ರಾಜ್ಯ ಸರ್ಕಾರವು ಮಂಡಳಿಯ ಶಿಫಾರಸ್ಸಿನ ಮೇಲೆ ಅಥವಾ ಅನ್ಯಥಾ, ಬಸವ ಕಲ್ಯಾಣದ ನಿರ್ವಹಣೆಗಾಗಿ ಉಪಬಂಧಗಳನ್ನು ರಚಿಸತಕ್ಕದ್ದು, ಈ ಉಪಬಂಧಗಳಲ್ಲಿ ಅದರ ಪರಂಪರೆ ತಾಣಗಳೂ ಸೇರಿದಂತೆ ಮಂಡಳಿಯ ಸ್ವತ್ತನ್ನು ಬಳಸಿಕೊಳ್ಳಬಹುದಾದ ರೀತಿ, ಪಟ್ಟಣಕ್ಕೆ ಬರುವ ಭಕ್ತರು, ಯಾತ್ರಿಕರು, ಪ್ರವಾಸಿಗರು ಮತ್ತು ಇತರ ಸಂದರ್ಶಕರು ಬಳಸಿಕೊಳ್ಳಬಹುದಾದ ವಿವಿಧ ಸೌಲಭ್ಯಗಳಿಗಾಗಿ ಅವರಿಂದ ವಸೂಲು ಮಾಡಬಹುದಾದ ದರಗಳು, ಶುಲ್ಕಗಳು ಅಥವಾ ಇತರ ವೆಚ್ಚಗಳು ಮತ್ತು ಪರಂಪರೆ ತಾಣಗಳ ಆವರಣಕ್ಕೆ ಸಂಬಂಧಿಸಿದ ಯುಕ್ತವಾದಂಥ ಇತರ ವಿಷಯಗಳು; ಭೂ ಕಂದಾಯದ ಬಾಕಿ ಎಂಬಂತೆ ಬಾಡಿಗೆ ಅಥವಾ ನಷ್ಟಪರಿಹಾರವನ್ನು ವಸೂಲು ಮಾಡುವ ಅಧಿಕಾರ ಮುಂತಾದ ಇತರ ವಿಷಯಗಳು ಒಳಗೊಂಡಿರತಕ್ಕದ್ದು.

**22. ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿಯು ಬಸವಕಲ್ಯಾಣಕ್ಕೆ ನಗರಾಭಿವೃದ್ಧಿ ಪ್ರಾಧಿಕಾರವಾಗಿರುವುದು.-** (1) ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ, 1961 ರಲ್ಲಿ (1963ರ ಕರ್ನಾಟಕ ಅಧಿನಿಯಮ 11) ಮತ್ತು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿನಿಯಮ, 1987 ರಲ್ಲಿ (1987ರ ಕರ್ನಾಟಕ ಅಧಿನಿಯಮ 37) ಏನೇ ಒಳಗೊಂಡಿದ್ದರೂ, ಮಂಡಳಿಯ ರಚನೆಯ ದಿನಾಂಕದಂದು ಮತ್ತು ಆ ದಿನಾಂಕದಿಂದ, ಮಂಡಳಿಯನ್ನು ಬಸವ ಕಲ್ಯಾಣದ ನಗರಾಭಿವೃದ್ಧಿ ಪ್ರಾಧಿಕಾರವೆಂದು ಭಾವಿಸತಕ್ಕದ್ದು ಮತ್ತು ಮಂಡಳಿಯು, ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿನಿಯಮ, 1987ರ (1987ರ ಕರ್ನಾಟಕ ಅಧಿನಿಯಮ 34) 3ನೇ ಪ್ರಕರಣದ ಅಡಿಯಲ್ಲಿ ರಚಿಸಿದ ಪ್ರಾಧಿಕಾರವಾಗಿದ್ದರೆ ಹೇಗೋ ಹಾಗೆ ನಗರಾಭಿವೃದ್ಧಿ ಪ್ರಾಧಿಕಾರದ ಎಲ್ಲಾ ಅಧಿಕಾರಗಳನ್ನು ಹೊಂದಿರತಕ್ಕದ್ದು ಮತ್ತು ಎಲ್ಲಾ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು.

(2) ಬಸವ ಕಲ್ಯಾಣ ಪಟ್ಟಣ ಯೋಜನೆ ಪ್ರಾಧಿಕಾರದ ಸಿಬ್ಬಂದಿ, ಆಸ್ತಿ ಮತ್ತು ಹೊಣೆಗಾರಿಕೆಗಳು ಬಸವ ಕಲ್ಯಾಣ ಅಭಿವೃದ್ಧಿ ಪ್ರಾಧಿಕಾರಕ್ಕೆ ವರ್ಗವಾಗತಕ್ಕದ್ದು.

**23. ಮಂಡಳಿಯ ಅನುಮತಿ ಇಲ್ಲದೆ ಯಾವುದೇ ಇತರ ಪ್ರಾಧಿಕಾರ ಅಥವಾ ವ್ಯಕ್ತಿಯು ಅಭಿವೃದ್ಧಿಯನ್ನು ಕೈಗೊಳ್ಳಕೂಡದು.-** (1) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನಲ್ಲಿ ಏನೇ ಒಳಗೊಂಡಿದ್ದಾಗ್ಯೂ, ಮಂಡಳಿಯ ಪೂರ್ವಾನುಮತಿಯೊಂದಿಗೆ ಹೊರತು, ಬಸವಕಲ್ಯಾಣದೊಳಗೆ, ಮಂಡಳಿಯು ಕಾಲಕಾಲಕ್ಕೆ ಅಧಿಸೂಚನೆಯ ಮೂಲಕ ಸರ್ಕಾರಿ ರಾಜ್ಯಪತ್ರದಲ್ಲಿ ಪ್ರಕಟಣೆಯ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ಮಾದರಿಗಳ ಯಾವುದೇ ಅಭಿವೃದ್ಧಿಯನ್ನು ಯಾವುದೇ ಪ್ರಾಧಿಕಾರ ಅಥವಾ ವ್ಯಕ್ತಿಯು ಕೈಗೊಳ್ಳತಕ್ಕದ್ದಲ್ಲ.

(2) ಬಸವಕಲ್ಯಾಣದೊಳಗೆ, (1)ನೇ ಉಪ ಪ್ರಕರಣದಲ್ಲಿ ಉಲ್ಲೇಖಿಸಿದ ಯಾವುದೇ ಅಭಿವೃದ್ಧಿ ಕೈಗೊಳ್ಳಲು, ಅಂಥ ಅಭಿವೃದ್ಧಿಗಾಗಿ ಮಂಡಳಿಯು ಅನುಮತಿಯನ್ನು ನೀಡಿದ್ದ ಹೊರತು, ಯಾವುದೇ ಸ್ಥಳೀಯ ಪ್ರಾಧಿಕಾರವು ಅನುಮತಿಯನ್ನು ನೀಡತಕ್ಕದ್ದಲ್ಲ.

(3) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ಅಭಿವೃದ್ಧಿಯನ್ನು ಕೈಗೊಳ್ಳಲು ಇಚ್ಛಿಸುವ ಯಾವುದೇ ಪ್ರಾಧಿಕಾರ ಅಥವಾ ವ್ಯಕ್ತಿಯು ಅಂಥ ಅಭಿವೃದ್ಧಿಯನ್ನು ಕೈಗೊಳ್ಳಲು ಅನುಮತಿಯನ್ನು ಕೋರಿ ಲಿಖಿತಅರ್ಜಿಯನ್ನು ಮಂಡಳಿಗೆ ಸಲ್ಲಿಸತಕ್ಕದ್ದು.

(4) ಮಂಡಳಿಯು, ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ, ತಾನು ವಿಧಿಸುವುದು ಸೂಕ್ತವೆಂದು ಭಾವಿಸಬಹುದಾದಂಥ ಷರತ್ತುಗಳೊಡನೆ ಅಥವಾ ಷರತ್ತುಗಳಿಲ್ಲದೆ ಅಂಥ ಅನುಮತಿಯನ್ನು ನೀಡಬಹುದು ಅಥವಾ ಅಂಥ ಅನುಮತಿಯನ್ನು ನೀಡಲು ನಿರಾಕರಿಸಬಹುದು.

(5) (4)ನೇ ಉಪ ಪ್ರಕರಣದ ಅಡಿಯಲ್ಲಿಯ ಮಂಡಳಿಯ ತೀರ್ಮಾನದಿಂದ ಬಾಧಿತವಾದ ಯಾವುದೇ ಪ್ರಾಧಿಕಾರ ಅಥವಾ ವ್ಯಕ್ತಿಯು, ತೀರ್ಮಾನದ ದಿನಾಂಕದಿಂದ ಮೂವತ್ತು ದಿನಗಳೊಳಗೆ ಅಂಥ ತೀರ್ಮಾನದ ವಿರುದ್ಧ ರಾಜ್ಯ ಸರ್ಕಾರಕ್ಕೆ ಅಪೀಲನ್ನು ಸಲ್ಲಿಸಬಹುದು, ಅದರ ತೀರ್ಮಾನವು ಅಂತಿಮವಾಗಿರತಕ್ಕದ್ದು:

ಪರಂತು, ಅಂಥ ಅಪೀಲನ್ನು ಸಲ್ಲಿಸುವ ಬಾಧಿತವಾದ ಪ್ರಾಧಿಕಾರವು, ಕೇಂದ್ರ ಸರ್ಕಾರದ ಆಡಳಿತ ನಿಯಂತ್ರಣದಲ್ಲಿದ್ದರೆ, ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದೊಡನೆ ಸಮಾಲೋಚನೆ ನಡೆಸಿದ ತರುವಾಯ ಅಪೀಲನ್ನು ತೀರ್ಮಾನಿಸತಕ್ಕದ್ದು.

(6) ಯಾವೊಬ್ಬ ವ್ಯಕ್ತಿ ಅಥವಾ ಪ್ರಾಧಿಕಾರವು (5)ನೇ ಉಪ ಪ್ರಕರಣದಲ್ಲಿ ಮಾರ್ಪಡಿಸಲಾದಂತೆ (4)ನೇ ಉಪ ಪ್ರಕರಣದ ಅಡಿಯಲ್ಲಿ ನೀಡಿದ ತೀರ್ಮಾನಕ್ಕೆ ವಿರುದ್ಧವಾಗಿ ಯಾವುದೇ ಕಾರ್ಯವನ್ನು ಕೈಗೊಂಡಿದ್ದರೆ, ಅಂಥ ತೀರ್ಮಾನಕ್ಕೆ ವಿರುದ್ಧವಾಗಿ ಕೈಗೊಂಡ ಯಾವುದೇ ಅಭಿವೃದ್ಧಿಯನ್ನು ಕೆಡಹುವ, ನಾಶಪಡಿಸುವ ಅಥವಾ ತೆಗೆದುಹಾಕುವ ಅಧಿಕಾರವನ್ನು ಮತ್ತು ಅಂಥ ಕೆಡಹುವ, ನಾಶಪಡಿಸುವ ಅಥವಾ ತೆಗೆದುಹಾಕುವ ವೆಚ್ಚವನ್ನು ಸಂಬಂಧಪಟ್ಟ ವ್ಯಕ್ತಿಯಿಂದ ಅಥವಾ ಪ್ರಾಧಿಕಾರದಿಂದ ವಸೂಲ್ಮಾಡುವ ಅಧಿಕಾರವನ್ನು ಮಂಡಳಿಯು ಹೊಂದಿರತಕ್ಕದ್ದು.

**24. ಪ್ರವೇಶಕ್ಕೆ ಅಧಿಕಾರ.-** ಮಂಡಳಿಯು, ಯಾವುದೇ ಭೂಮಿ ಅಥವಾ ಕಟ್ಟಡವನ್ನು, ಕೆಲಸಗಾರರ ಸಹಾಯಪಡೆದು ಅಥವಾ ಸಹಾಯವನ್ನು ಪಡೆಯದೆ,

(ಎ) ಅಂಥ ಭೂಮಿ ಅಥವಾ ಕಟ್ಟಡಕ್ಕಾಗಿ ಯಾವುದೇ ವಿಚಾರಣೆ, ತಪಾಸಣೆ, ಅಳತೆ ಅಥವಾ ಸಮೀಕ್ಷೆ ಅಥವಾ ಮಟ್ಟ ತೆಗೆದುಕೊಳ್ಳುವ;

(ಬಿ) ನಿರ್ಮಾಣದಲ್ಲಿರುವ ಕಾಮಗಾರಿಗಳನ್ನು ಪರೀಕ್ಷಿಸುವ ಮತ್ತು ಒಳಚರಂಡಿ ಹಾಗೂ ಚರಂಡಿಗಳ ಮಾರ್ಗವನ್ನು ಖಚಿತಪಡಿಸಿಕೊಳ್ಳುವ;

(ಸಿ) ಕೆಳ ಮಣ್ಣಿನಲ್ಲಿ ತೋಡುವ ಅಥವಾ ಕೊರೆಯುವ;

(ಡಿ) ಕಾಮಗಾರಿಯ ಗಡಿಗಳನ್ನು ಮತ್ತು ಉದ್ದೇಶಿತ ರೇಖೆಗಳನ್ನು ಹಾಕುವ;

(ಇ) ಗುರುತುಗಳನ್ನು ಇರಿಸುವ ಹಾಗೂ ಕಂದಕಗಳನ್ನು ತೋಡುವ ಮೂಲಕ ಅಂಥ ಮಟ್ಟಗಳನ್ನು, ಗಡಿಗಳನ್ನು ಮತ್ತು ರೇಖೆಗಳನ್ನು ಹಾಕುವ;

(ಎಫ್) ಯಾವುದೇ ಯೋಜನೆಯನ್ನು ಉಲ್ಲಂಘಿಸಿ ಅಥವಾ ಯಾವ ಷರತ್ತುಗಳಿಗೆ ಒಳಪಟ್ಟು ಅಂಥ ಅನುಮತಿಯನ್ನು ನೀಡಲಾಗಿತ್ತೋ ಆ ಷರತ್ತುಗಳನ್ನು ಉಲ್ಲಂಘಿಸಿ ಯಾವುದೇ ಭೂಮಿಯನ್ನು ಅಭಿವೃದ್ಧಿಪಡಿಸಲಾಗುತ್ತಿದೆಯೇ ಅಥವಾ ಅಭಿವೃದ್ಧಿಪಡಿಸಲಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳುವ; ಅಥವಾ

(ಜಿ) ಈ ಅಧಿನಿಯಮದ ದಕ್ಷ ಆಡಳಿತಕ್ಕಾಗಿ ಅವಶ್ಯಕವಾದ ಇತರ ಯಾವುದೇ ಕಾರ್ಯಗಳನ್ನು ಮಾಡುವ,-

- ಉದ್ದೇಶಕ್ಕಾಗಿ ಪ್ರವೇಶಿಸಲು ಯಾವೊಬ್ಬ ವ್ಯಕ್ತಿಯನ್ನು ಪ್ರಾಧಿಕರಿಸಬಹುದು:

ಪರಂತು,

(i) ಸೂರ್ಯೋದಯ ಮತ್ತು ಸೂರ್ಯಾಸ್ತದೊಳಗಿನ ಅವಧಿಯ ಹೊರತಾಗಿ ಮತ್ತು ಅಧಿಭೋಗದಾರನಿಗೆ ಅಥವಾ ಅಲ್ಲಿ ಯಾವೊಬ್ಬ ಅಧಿಭೋಗದಾರನು ಇರದಿದ್ದರೆ ಭೂಮಿಯ ಅಥವಾ ಕಟ್ಟಡದ ಮಾಲೀಕನಿಗೆ ಸೂಕ್ತ ನೋಟೀಸನ್ನು ಕೊಡದೆ ಹಾಗೆ ಪ್ರವೇಶಿಸತಕ್ಕದ್ದಲ್ಲ;

(ii) ಮಹಿಳೆಯರು ಅಥವಾ ಮಕ್ಕಳು, ಯಾರಾದರೂ ಇದ್ದರೆ ಅವರು, ಅಂಥ ಭೂಮಿ ಅಥವಾ ಕಟ್ಟಡದಿಂದ ಹೊರ ಹೋಗಲು ಸಾಕಷ್ಟು ಅವಕಾಶವನ್ನು ಪ್ರತಿ ಸಂದರ್ಭದಲ್ಲಿಯೂ ನೀಡತಕ್ಕದ್ದು;

(iii) ಪ್ರವೇಶ ಮಾಡಿದ ಉದ್ದೇಶದ ಜರೂರು ಅವಶ್ಯಕತೆಗೆ ಸರಿಹೊಂದುವಷ್ಟರ ಮಟ್ಟಿಗೆ ಪ್ರವೇಶಿಸಿದ ಭೂಮಿ ಅಥವಾ ಕಟ್ಟಡದ ಅಧಿಭೋಗದಾರನ ಸಾಮಾಜಿಕ ಮತ್ತು ಧಾರ್ಮಿಕ ಆಚರಣೆಗೆ ಯಾವಾಗಲೂ ಸೂಕ್ತ ಗೌರವ ನೀಡತಕ್ಕದ್ದು.

**25. ಶುಲ್ಕ ವಿಧಿಸುವುದು.-** 23ನೇ ಪ್ರಕರಣದ ಅಡಿಯಲ್ಲಿ ಅನುಮತಿಗಳ ನೀಡಿಕೆಗಾಗಿ ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ದರದಲ್ಲಿ ಶುಲ್ಕವನ್ನು ವಿಧಿಸುವುದು ಪ್ರಾಧಿಕಾರಕ್ಕೆ ಕಾನೂನುಬದ್ಧವಾಗಿರತಕ್ಕದ್ದು.

**26. ಮಂಡಳಿಗೆ ರಾಜ್ಯ ಸರ್ಕಾರದ ಅಧಿಕಾರಗಳ ಪ್ರತ್ಯಾಯೋಜನೆ.-** ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಹಾಗೂ ಪುರಾತತ್ವ ಸ್ಥಳಗಳು ಮತ್ತು ಅವಶೇಷಗಳ ಅಧಿನಿಯಮ, 1961 ರಲ್ಲಿ (1962ರ ಕರ್ನಾಟಕ ಅಧಿನಿಯಮ ಸಂಖ್ಯೆ 7) ಏನೇ ಇದ್ದರೂ, ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ತಾನು ಚಲಾಯಿಸಬಹುದಾದ ಯಾವುವೇ ಅಧಿಕಾರಗಳನ್ನು ಮಂಡಳಿಗೆ ಪ್ರತ್ಯಾಯೋಜಿಸಬಹುದು ಮತ್ತು ಅಂಥ ಅಧಿಸೂಚನೆಯನ್ನು ಹೊರಡಿಸಿದ ತರುವಾಯ ಮಂಡಳಿಯು ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು ಮತ್ತು ಅಂಥ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು.

**27. ಬೀದಿ ಮುಂತಾದವುಗಳ ನಿರ್ವಹಣೆ ಕರ್ತವ್ಯ.-** ಕರ್ನಾಟಕ ಪೌರಸಭೆ ಅಧಿನಿಯಮ, 1964 ರಲ್ಲಿ (1964ರ ಕರ್ನಾಟಕ ಅಧಿನಿಯಮ 22) ಏನೇ ಇದ್ದರೂ, ಈ ಮುಂದಿನ ವಿಷಯಗಳಿಗೆ ಸಂಬಂಧಿಸಿದಂತೆ ತಾನು ಕಾನೂನು ಬದ್ಧವಾಗಿ ಬಳಸಬಹುದಾದ ಯಾವುದೇ ಸಾಧನ ಅಥವಾ ತೆಗೆದುಕೊಳ್ಳಬಹುದಾದ ಯಾವುದೇ ಕ್ರಮದ ಮೂಲಕ ಸಮಂಜಸವಾದ ಮತ್ತು ಸಮರ್ಪಕವಾದ ಉಪಬಂಧಗಳನ್ನು ರಚಿಸುವುದು ಮಂಡಳಿಯ ಕರ್ತವ್ಯವಾಗಿರತಕ್ಕದ್ದು; ಎಂದರೆ:-

(ಎ) ಬಸವಕಲ್ಯಾಣ ಪ್ರದೇಶದಲ್ಲಿ ಬೀದಿಗಳ ನಿರ್ವಹಣೆ, ದುರಸ್ತಿ ಮಾಡಿಸುವುದು, ದೀಪ ವ್ಯವಸ್ಥೆ ಮತ್ತು ಸ್ವಚ್ಛಗೊಳಿಸುವುದು; ಮತ್ತು

(ಬಿ) ಬಸವಕಲ್ಯಾಣ ಪ್ರದೇಶದಲ್ಲಿಯ ಬೀದಿಗಳ ಸಂಬಂಧದಲ್ಲಿ ಚರಂಡಿ, ನೈರ್ಮಲ್ಯ ವ್ಯವಸ್ಥೆ ಮತ್ತು ನೀರು ಸರಬರಾಜು.

**28. 1974ರ ಕರ್ನಾಟಕ ಅಧಿನಿಯಮ 32ನ್ನು ಮಂಡಳಿಯ ಆವರಣಕ್ಕೆ ಅನ್ವಯಿಸುವುದು.-** (1) ರಾಜ್ಯ ಸರ್ಕಾರವು, (2)ನೇ ಉಪಪ್ರಕರಣದ ಉಪಬಂಧಗಳಿಗೆ ಒಳಪಟ್ಟು ಅಧಿಸೂಚನೆಯ ಮೂಲಕ, ಅಂಥ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದಂಥ ದಿನಾಂಕದಿಂದ, ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) ಅಧಿನಿಯಮ, 1974 ಆ ಅಧಿನಿಯಮವು ಸಾರ್ವಜನಿಕ ಆವರಣಗಳಿಗೆ ಸಂಬಂಧಿಸಿ ಅನ್ವಯಿಸುವಂತೆ ಮಂಡಳಿಗೆ ಸೇರಿದ, ಅದರಲ್ಲಿ ನಿಹಿತವಾದ ಅಥವಾ ಅದು ಗುತ್ತಿಗೆಗೆ ತೆಗೆದುಕೊಂಡ ಆವರಣಕ್ಕೆ, ಅನ್ವಯಿಸತಕ್ಕದ್ದೆಂದು ಉಪಬಂಧ ಕಲ್ಪಿಸಬಹುದು.

(2) (1)ನೇ ಉಪ ಪ್ರಕರಣದ ಅಡಿಯಲ್ಲಿ ಅಧಿಸೂಚನೆಯನ್ನು ಹೊರಡಿಸಿದ ತರುವಾಯ, ಮೇಲ್ಕಂಡ ಅಧಿನಿಯಮವು ಮತ್ತು ಅದರಡಿ ರಚಿಸಿದ ನಿಯಮಗಳು ಈ ಮುಂದಿನ ಮಾರ್ಪಾಡುಗಳೊಡನೆ ಮಂಡಳಿಗೆ ಸೇರಿದ ಆವರಣಗಳಿಗೆ ಅನ್ವಯವಾಗತಕ್ಕದ್ದು, ಎಂದರೆ,-

(ಎ) ರಾಜ್ಯ ಸರ್ಕಾರವು, ತಾನು ಸೂಕ್ತವೆಂದು ಭಾವಿಸುವಂತೆ ರಾಜ್ಯ ಸರ್ಕಾರದ ಅಥವಾ ಮಂಡಳಿಯ ಒಬ್ಬ ಅಧಿಕಾರಿಯನ್ನು ಮೇಲ್ಕಂಡ ಅಧಿನಿಯಮದ ಉದ್ದೇಶಗಳಿಗಾಗಿ ಸಕ್ಷಮ ಅಧಿಕಾರಿ ಎಂದು ನೇಮಿಸಬಹುದು;

(ಬಿ) ಆ ಅಧಿನಿಯಮದಲ್ಲಿ ಮತ್ತು ಆ ನಿಯಮಗಳಲ್ಲಿ "ಸಾರ್ವಜನಿಕ ಆವರಣ" ಕ್ಕೆ ಮಾಡಿದ ಉಲ್ಲೇಖಗಳು ಮಂಡಳಿಯ ಆವರಣಗಳಿಗೆ ಮಾಡಿದ ಉಲ್ಲೇಖಗಳೆಂದು ಭಾವಿಸತಕ್ಕದ್ದು ಮತ್ತು ಆ ಅಧಿನಿಯಮದ 6, 7, 8, 14, 15, 16 ಮತ್ತು 17ನೇ ಪ್ರಕರಣಗಳಲ್ಲಿ "ರಾಜ್ಯ ಸರ್ಕಾರ"ಕ್ಕೆ ಮಾಡಿದ ಉಲ್ಲೇಖಗಳನ್ನು, ಮಂಡಳಿಗೆ ಮಾಡಿದ ಉಲ್ಲೇಖಗಳೆಂದು ಭಾವಿಸತಕ್ಕದ್ದು.

**29. ಪ್ರವಾಸೋದ್ಯಮಕ್ಕೆ ಮತ್ತು ಯಾತ್ರೆ ಕೈಗೊಳ್ಳುವುದಕ್ಕೆ ಮಂಡಳಿಯು ಉತ್ತೇಜಿಸುವುದು.-** ಈ ಪಾರಂಪರಿಕ ತಾಣಗಳಿಗೆ ಸಾಕಷ್ಟು ಪ್ರಚಾರವನ್ನು ನೀಡಲು ಸಾಂಸ್ಕೃತಿಕ, ಚಾರಿತ್ರಿಕ ಮತ್ತು ಯಾತ್ರಿಕ ಪ್ರವಾಸೋದ್ಯಮವನ್ನು ಉತ್ತೇಜಿಸುವುದಕ್ಕಾಗಿ ಮಂಡಳಿಯು ಕಾರ್ಯಕ್ರಮಗಳನ್ನು ಮತ್ತು ಕಾರ್ಯ ಚಟುವಟಿಕೆಗಳನ್ನು ವ್ಯವಸ್ಥೆ ಮಾಡಬಹುದು. ಅಂಥ ಕಾರ್ಯಕ್ರಮಗಳು ಈ ಮುಂದಿನವುಗಳನ್ನು ಒಳಗೊಂಡಿರತಕ್ಕದ್ದು:-

(ಎ) ಬಸವಕಲ್ಯಾಣ ಉತ್ಸವ

(ಬಿ) ಶರಣ ಸಾಹಿತ್ಯೋತ್ಸವ

(ಸಿ) ಕಲಾ ಪ್ರದರ್ಶನಗಳು ಮತ್ತು ಮಾರಾಟ

(ಡಿ) ಸಮ್ಮೇಳನಗಳು, ವಿಚಾರಗೋಷ್ಠಿಗಳು, ಕಾರ್ಯಾಗಾರಗಳು

(ಇ) ವಾರ್ಷಿಕ ಜಾತ್ರೆಗಳು ಮತ್ತು ವಿಶೇಷ ಸ್ವರೂಪದ ಹಬ್ಬಗಳು

**30. ಅಧಿಕಾರಗಳ ಪ್ರತ್ಯಾಯೋಜನೆ.-** (1) 45ನೇ ಪ್ರಕರಣದಡಿ ನಿಯಮಗಳನ್ನು ರಚಿಸುವ ಅಧಿಕಾರವನ್ನು ಹೊರತುಪಡಿಸಿ ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಈ ಅಧಿನಿಯಮದಡಿ ಅಥವಾ ಅಧಿನಿಯಮದ ಮೂಲಕ ಅದಕ್ಕೆ ಪ್ರದತ್ತವಾದ ಯಾವುವೇ ಅಧಿಕಾರಗಳನ್ನು, ಯಾವುದೇ ಪ್ರಾಧಿಕಾರಕ್ಕೆ ಪ್ರತ್ಯಾಯೋಜಿಸಬಹುದು.

(2) 46ನೇ ಪ್ರಕರಣದಡಿಯ ವಿನಿಯಮ ರಚನಾಧಿಕಾರವನ್ನು ಹೊರತುಪಡಿಸಿ, ಮಂಡಳಿಯು ವಿನಿಯಮಗಳ ಮೂಲಕ, ಈ ಅಧಿನಿಯಮದಡಿ ಅಥವಾ ಅಧಿನಿಯಮದ ಮೂಲಕ ಅದಕ್ಕೆ ಪ್ರದತ್ತವಾದ ಯಾವುವೇ ಅಧಿಕಾರಗಳನ್ನು ಆಯುಕ್ತರಿಗೆ ಅಥವಾ ಮಂಡಳಿಯ ಇತರ ಅಧಿಕಾರಿಗಳಿಗೆ ಪ್ರತ್ಯಾಯೋಜಿಸಬಹುದು.

## ಅಧ್ಯಾಯ IV

## ಹಣಕಾಸು ಮತ್ತು ಸ್ವತ್ತು

**31. ಮಂಡಳಿಯ ನಿಧಿ.-** (1) ಬಸವಕಲ್ಯಾಣ ಅಭಿವೃದ್ಧಿ ಮಂಡಳಿ ನಿಧಿಯೆಂದು ಕರೆಯಲಾಗುವ ಒಂದು ನಿಧಿಯು ಇರತಕ್ಕದ್ದು.

(2) ಸದರಿ ನಿಧಿಗೆ,-

(i) ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ, ಯಾವುದೇ ಸ್ಥಳೀಯ ಪ್ರಾಧಿಕಾರ ಅಥವಾ ನಿಗಮಿತವಾದ ಇಲ್ಲವೇ ನಿಗಮಿತವಲ್ಲದ ಯಾವುದೇ ನಿಕಾಯ ಅಥವಾ ಯಾವೊಬ್ಬ ವ್ಯಕ್ತಿಯು ನೀಡಿದ ಎಲ್ಲ ಅನುದಾನಗಳು, ಧನ ಸಹಾಯ, ದೇಣಿಗೆಗಳು ಮತ್ತು ದಾನಗಳನ್ನು;

(ii) ಮಂಡಳಿಯು ಸಾಲ ಪಡೆದ ಮೊಬಲಗನ್ನು; ಮತ್ತು

(iii) ಯಾವುದೇ ಮೂಲದಿಂದಾಗಲೀ, ಮಂಡಳಿಯು ಅಥವಾ ಮಂಡಳಿಯ ಪರವಾಗಿ ಪಡೆದುಕೊಂಡ ಇತರ ಎಲ್ಲ ಮೊತ್ತಗಳನ್ನು,

-ಜಮೆ ಮಾಡತಕ್ಕದ್ದು.

(3) ರಾಜ್ಯ ಸರ್ಕಾರವು ಅನ್ಯಥಾ ನಿರ್ದೇಶಿಸಿದ ಹೊರತು, ನಿಧಿಗೆ ಜಮೆಮಾಡಲಾದ ಎಲ್ಲ ಹಣವನ್ನು ಯಾವುದೇ ಅನುಸೂಚಿತ ಬ್ಯಾಂಕಿನಲ್ಲಿ ಅಥವಾ ರಾಜ್ಯ ಸರ್ಕಾರದ ಖಜಾನೆಯಲ್ಲಿ ಇರಿಸತಕ್ಕದ್ದು.

(4) ಮಂಡಳಿಯ ಆಯುಕ್ತರಿಗೆ ಮತ್ತು ಇತರ ಅಧಿಕಾರಿಗಳಿಗೆ ಮತ್ತು ನೌಕರರಿಗೆ ಸಂದಾಯ ಮಾಡಬೇಕಾದ ವೇತನಗಳು ಮತ್ತು ಭತ್ಯೆಗಳು ಮತ್ತು ನಿವೃತ್ತಿವೇತನವೇನಾದರೂ ಇದ್ದಲ್ಲಿ, ಅದನ್ನೂ ಒಳಗೊಂಡಂತೆ ಮಂಡಳಿಯ ಆಡಳಿತಾತ್ಮಕ ವೆಚ್ಚಗಳನ್ನು ಮಂಡ ಳಿಯ ನಿಧಿಯಿಂದ ಭರಿಸತಕ್ಕದ್ದು.

**32. ನಿಧಿಯ ಬಳಕೆ.-** ನಿಧಿಯನ್ನು ಮತ್ತು ಮಂಡಳಿಯು ಹೊಂದಿರುವ ಅಥವಾ ಅದರಲ್ಲಿ ನಿಹಿತವಾಗಿರುವ ಎಲ್ಲ ಸ್ವತ್ತನ್ನು ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವುದಕ್ಕಾಗಿ ಬಳಸಿಕೊಳ್ಳತಕ್ಕದ್ದು.

**33. ಸರ್ಕಾರದಿಂದ ಅನುದಾನ.-** ರಾಜ್ಯ ಸರ್ಕಾರವು ಪ್ರತಿ ವರ್ಷವೂ ಮಂಡಳಿಗೆ, ಮಂಡಲಿಯು ತನ್ನದೇ ಸಂಪನ್ಮೂಲಗಳಿಂದ ಸ್ವಯಂ ನಿರ್ವಹಣೆ ಮಾಡಿಕೊಳ್ಳುವ ಹಂತವನ್ನು ತಲುಪುವವರೆಗೆ, ಅದರ ಆಡಳಿತಾತ್ಮಕ ವೆಚ್ಚಗಳಿಗೆ ಸಮನಾದ ಮೊತ್ತವನ್ನು ಅನುದಾನದ ರೂಪದಲ್ಲಿ ನೀಡತಕ್ಕದ್ದು.

**34. ಮಂಡಲಿಯ ಆಯವ್ಯಯ.-** (1) ಮಂಡಳಿಯು, ಪ್ರತಿ ವರ್ಷವೂ ನಿಯಮಿಸಬಹುದಾದಂಥ ದಿನಾಂಕಕ್ಕೆ ಮೊದಲು ಮತ್ತು ಅಂಥ ನಮೂನೆಯಲ್ಲಿ, ಮುಂಬರುವ ಏಪ್ರಿಲ್ ಒಂದನೆಯ ದಿನಾಂಕದಂದು ಪ್ರಾರಂಭವಾಗುವ ಹಣಕಾಸು ವರ್ಷಕ್ಕಾಗಿ ತನ್ನ ಆದಾಯ ಮತ್ತು ವೆಚ್ಚದ ಆಯವ್ಯಯ ಅಂದಾಜನ್ನು ಸಿದ್ಧಪಡಿಸತಕ್ಕದ್ದು ಮತ್ತು ರಾಜ್ಯ ಸರ್ಕಾರಕ್ಕೆ ಮಂಜೂರಾತಿಗಾಗಿ ಕಳುಹಿಸತಕ್ಕದ್ದು. ಮಂಡಳಿಯು ಅವಶ್ಯವಾದರೆ, ಯಾವುದೇ ಹಣಕಾಸು ವರ್ಷದ ಅವಧಿಯಲ್ಲಿ ಪೂರಕ ಆಯವ್ಯಯ ಅಂದಾಜುಗಳನ್ನು ಸಹ ಸಿದ್ಧಪಡಿಸಬಹುದು.

(2) ರಾಜ್ಯ ಸರ್ಕಾರವು, ಈ ಆಯವ್ಯಯ ಅಂದಾಜುಗಳನ್ನು ಮತ್ತು ಪೂರಕ ಬಜೆಟ್ ಅಂದಾಜುಗಳನ್ನು, ಅವುಗಳಲ್ಲಿ ಮಾರ್ಪಾಟುಗಳನ್ನು ಮಾಡಿ ಅಥವಾ ಮಾಡದೆ ಅನುಮೋದಿಸತಕ್ಕದ್ದು.

(3) ಅತ್ಯಂತ ತುರ್ತು ಸಂದರ್ಭಗಳಲ್ಲಿ, ಆಯುಕ್ತರು ಒಂದು ಹಣಕಾಸು ವರ್ಷದಲ್ಲಿ ಐದು ಲಕ್ಷ ರೂಪಾಯಿಗಳಿಗೆ ಮೀರದಂತೆ ವೆಚ್ಚವನ್ನು, ಅಂಥ ವೆಚ್ಚವನ್ನು (2) ನೇ ಉಪ-ಪ್ರಕರಣದಡಿ ರಾಜ್ಯ ಸರ್ಕಾರವು ಅನುಮೋದಿಸಿದ ವಾರ್ಷಿಕ ಅಥವಾ ಪೂರಕ ಆಯವ್ಯಯ ಅಂದಾಜಿನಲ್ಲಿ ಸೇರಿಸಿಲ್ಲದಿದ್ದಾಗ್ಯೂ, ಮಾಡಲು ಸಕ್ಷಮರಾಗಿರತಕ್ಕದ್ದು.

(4) ಆಯುಕ್ತರು, ಒಂದು ಬಾರಿಗೆ, ಒಂದು ಲಕ್ಷ ರೂಪಾಯಿಗಳ ಗರಿಷ್ಠ ಮಿತಿಗೆ ಒಳಪಟ್ಟು, ವೆಚ್ಚದ ಒಂದು ಘಟಕದಿಂದ ಇನ್ನೊಂದು ಘಟಕಕ್ಕೆ ನಿಧಿಗಳ ಪುನರ್‌ವಿನಿಯೋಗ ಮಾಡುವ ಅಧಿಕಾರವನ್ನು ಹೊಂದಿರತಕ್ಕದ್ದು.

**35. ಲೆಕ್ಕ ಪತ್ರಗಳು ಮತ್ತು ಲೆಕ್ಕಪರಿಶೋಧನೆ.-** (1) ಆಯುಕ್ತರು, ನಿಯಮಿಸಬಹುದಾದಂಥ ಲೆಕ್ಕಪತ್ರಗಳ ಪುಸ್ತಕಗಳನ್ನು ಮತ್ತು ಇತರ ರಿಜಿಸ್ಟರುಗಳನ್ನು ನಿರ್ವಹಿಸಿಕೊಂಡು ಬರುವಂತೆ ಮಾಡತಕ್ಕದ್ದು ಮತ್ತು ನಿಯಮಿಸಲಾದ ವಿಧಾನದಲ್ಲಿ ವಾರ್ಷಿಕ ಲೆಕ್ಕಪತ್ರಗಳ ತಃಖ್ತೆಯನ್ನು ತಯಾರಿಸತಕ್ಕದ್ದು.

(2) ಮಂಡಳಿಯ ಹಣಕಾಸು ವರ್ಷವು ಪ್ರತಿ ಕ್ಯಾಲೆಂಡರ್ ವರ್ಷದ ಏಪ್ರಿಲ್ ಒಂದನೆಯ ದಿನಾಂಕದಂದು ಪ್ರಾರಂಭವಾಗತಕ್ಕದ್ದು ಮತ್ತು ಮುಂಬರುವ ಕ್ಯಾಲೆಂಡರ್ ವರ್ಷದ ಮಾರ್ಚಿ 31ನೇ ದಿನದಂದು ಕೊನೆಗೊಳ್ಳತಕ್ಕದ್ದು.

(3) ಮಂಡಳಿಯ ಲೆಕ್ಕಪತ್ರಗಳನ್ನು ರಾಜ್ಯ ಲೆಕ್ಕಪತ್ರಗಳ ಇಲಾಖೆಯ ನಿಯಂತ್ರಣಾಧಿಕಾರಿಯು ವಾರ್ಷಿಕವಾಗಿ ಲೆಕ್ಕಪರಿಶೋಧನೆ ನಡೆಸತಕ್ಕದ್ದು. ಮಂಡಲಿ ಅಥವಾ ರಾಜ್ಯ ಸರ್ಕಾರವು ಸಮವರ್ತಿ ಮತ್ತು ವಿಶೇಷ ಲೆಕ್ಕಪರಿಶೋಧನೆಗಾಗಿಯೂ ಆದೇಶಿಸಬಹುದು.

(4) ಲೆಕ್ಕಪರಿಶೋಧಕನು, ಲೆಕ್ಕಪರಿಶೋಧನೆಯ ಉದ್ದೇಶಗಳಿಗಾಗಿ, ಮಂಡಳಿಯ ಎಲ್ಲ ಲೆಕ್ಕಪತ್ರಗಳನ್ನು ಮತ್ತು ಇತರ ದಾಖಲೆಗಳನ್ನು ನೋಡುವ ಅವಕಾಶವನ್ನು ಹೊಂದಿರತಕ್ಕದ್ದು.

(5) ಮಂಡಳಿಯು, ಲೆಕ್ಕಪತ್ರಗಳ ವಾರ್ಷಿಕ ತಃಖ್ತೆಯನ್ನು ಮತ್ತು ಲೆಕ್ಕಪರಿಶೋಧಕನ ವರದಿಯನ್ನು ಸ್ವೀಕರಿಸಿದ ತರುವಾಯ, ಸಾಧ್ಯವಾಗಬಹುದಾದಷ್ಟು ಬೇಗನೆ, ತನ್ನ ಸಭೆಯಲ್ಲಿ ಅದನ್ನು ಪರಿಶೀಲಿಸತಕ್ಕದ್ದು ಮತ್ತು ವಾರ್ಷಿಕ ಲೆಕ್ಕಪತ್ರಗಳ ತಃಖ್ತೆ ಹಾಗೂ ಲೆಕ್ಕಪರಿಶೋಧಕನ ವರದಿಯ ಪ್ರತಿಯನ್ನು, ಲೆಕ್ಕಪರಿಶೋಧಕನು ಮಾಡಿದ ಟೀಕೆಗಳೇನಾದರೂ ಇದ್ದಲ್ಲಿ, ಅದಕ್ಕೆ ನೀಡಿದ ತನ್ನ ವಿವರಣೆ ಮತ್ತು ಲೆಕ್ಕಪರಿಶೋಧಕನು ಸೂಚಿಸಿದ ಅಕ್ರಮತೆಗಳು ಅಥವಾ ಲೋಪದೋಷಗಳೇನಾದರೂ ಇದ್ದಲ್ಲಿ, ಅವುಗಳ ಪರಿಹಾರೋಪಾಯಕ್ಕಾಗಿ ಮಂಡಳಿಯು ಕೈಗೊಂಡ ಕ್ರಮದ ವಿವರಣೆಗಳ ಜೊತೆಗೆ ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು.

(6) ರಾಜ್ಯ ಸರ್ಕಾರವು, ಲೆಕ್ಕ ಪರಿಶೋಧಕನ ವರದಿಯನ್ನು ಮತ್ತು (5) ನೇ ಉಪ-ಪ್ರಕರಣದ ಅಡಿಯಲ್ಲಿ ತನಗೆ ಸಲ್ಲಿಸಲಾದ ಇತರ ದಸ್ತಾವೇಜುಗಳನ್ನು ಪರಿಶೀಲಿಸಿದ ನಂತರ, ಮಂಡಳಿಗೆ, ಅದು ಸೂಕ್ತವೆಂದು ಭಾವಿಸುವಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ಮಂಡಲಿಯು ಅಂಥ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

**36. ವರದಿಗಳು.-** (1) ಮಂಡಳಿಯು, ಪ್ರತಿಯೊಂದು ಹಣಕಾಸು ವರ್ಷಕ್ಕಾಗಿ, ತನ್ನ ಕಾರ್ಯನಿರ್ವಹಣೆ ಬಗ್ಗೆ ವಾರ್ಷಿಕ ವರದಿಯೊಂದನ್ನು ತಯಾರಿಸತಕ್ಕದ್ದು ಮತ್ತು 32ನೇ ಪ್ರಕರಣದ ಅಡಿಯ ಇತರ ವರದಿಗಳೊಂದಿಗೆ ಅದನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

(2) ಮಂಡಳಿಯು, ನಿಯಮಿಸಬಹುದಾದಂಥ ದಿನಾಂಕಕ್ಕಿಂತ ಮೊದಲು, ಅಂಥ ನಮೂನೆಯಲ್ಲಿ ಮತ್ತು ಅಂಥ ಅವಧಿಯ ಅಂತರದಲ್ಲಿ, ನಿಯಮಿಸಲಾದ ವರದಿಗಳನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

## ಅಧ್ಯಾಯ V

### ಸಂಕೀರ್ಣ

**37. ಮಂಡಳಿಯು ತನ್ನ ಅಧಿಕಾರ ವ್ಯಾಪ್ತಿಯೊಳಗಿನ ಯಾವುದೇ ಜಮೀನನ್ನು ಮಾರಾಟ ಮಾಡಕೂಡದು.-** ಮಂಡಳಿಯು, ಸರ್ಕಾರದ ಪೂರ್ವಾನುಮೋದನೆ ಪಡೆಯದೆ, ಯಾವುದೇ ಉದ್ದೇಶಕ್ಕಾಗಿ ಮತ್ತು ಯಾವೊಬ್ಬ ವ್ಯಕ್ತಿಗೆ ತನ್ನ ಅಧಿಕಾರ ವ್ಯಾಪ್ತಿಯಲ್ಲಿ ಬರುವ ಯಾವುದೇ ಜಮೀನನ್ನು ಮಾರಾಟ ಮಾಡತಕ್ಕದ್ದಲ್ಲ.

**38. ಕೆಲವು ವ್ಯಕ್ತಿಗಳು ಸಾರ್ವಜನಿಕ ನೌಕರರಾಗಿರತಕ್ಕದ್ದು.-** ಮಂಡಳಿಯ ಎಲ್ಲ ಸದಸ್ಯರು, ಅಧಿಕಾರಿಗಳು ಮತ್ತು ನೌಕರರನ್ನು, ಅವರು ಈ ಅಧಿನಿಯಮದ ಯಾವುವೇ ಉಪಬಂಧಗಳ ಅನುಸರಣೆಯಲ್ಲಿ ಕಾರ್ಯನಿರ್ವಹಿಸುತ್ತಿರುವಾಗ ಅಥವಾ ಕಾರ್ಯ ನಿರ್ವಹಿಸುತ್ತಿರುವರೆಂದು ತಾತ್ಪರ್ಯವಾದಾಗ ಅವರನ್ನು ಭಾರತ ದಂಡ ಸಂಹಿತೆಯ 21ನೇ ಪ್ರಕರಣದ ಅರ್ಥವ್ಯಾಪ್ತಿಯೊಳಗೆ ಸಾರ್ವಜನಿಕ ನೌಕರರು ಎಂಬುದಾಗಿ ಭಾವಿಸತಕ್ಕದ್ದು.

**39. ಈ ಅಧಿನಿಯಮದ ಅಡಿ ಸದ್ಭಾವನೆಯಿಂದ ಕೈಗೊಂಡ ಕ್ರಮಕ್ಕೆ ರಕ್ಷಣೆ.-** ಈ ಅಧಿನಿಯಮದ ಅಡಿಯಲ್ಲಿ ಸದ್ಭಾವನೆಯಿಂದ ಕೈಗೊಂಡ ಅಥವಾ ಕೈಗೊಳ್ಳಲು ಉದ್ದೇಶಿಸಿದ ಯಾವುದೇ ಕೃತ್ಯಕ್ಕಾಗಿ, ಯಾವೊಬ್ಬ ವ್ಯಕ್ತಿಯ ವಿರುದ್ಧ ಯಾವುದೇ ದಾವೆ, ಪ್ರಾಸಿಕ್ಯೂಷನ್ ಅಥವಾ ಇತರೆ ಕಾನೂನು ವ್ಯವಹರಣೆಗಳನ್ನು ಹೂಡಲು ಅವಕಾಶವಿರತಕ್ಕದ್ದಲ್ಲ.

**40. ಕರ್ತವ್ಯ ನಿರ್ವಹಣೆಯಲ್ಲಿ ಲೋಪ.-** (1) ಈ ಅಧಿನಿಯಮದಿಂದ ಅಥವಾ ಅದರ ಅಡಿಯಲ್ಲಿ ವಿಧಿಸಲಾದ ಯಾವುದೇ ಕರ್ತವ್ಯದ ನಿರ್ವಹಣೆಯನ್ನು ಮಂಡಳಿಯು ಮಾಡಿಲ್ಲ ಎಂದು ರಾಜ್ಯ ಸರ್ಕಾರಕ್ಕೆ ಮನವರಿಕೆಯಾದರೆ, ಆ ಕರ್ತವ್ಯದ ನಿರ್ವಹಣೆಗಾಗಿ ಅದು ಒಂದು ಅವಧಿಯನ್ನು ನಿಗದಿಪಡಿಸತಕ್ಕದ್ದು.

(2) ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ, ಅದರ ಕರ್ತವ್ಯ ನಿರ್ವಹಣೆಗಾಗಿ ಹಾಗೆ ನಿಗದಿಪಡಿಸಿದ ಅವಧಿಯೊಳಗೆ ಅಂಥ ಕರ್ತವ್ಯ ನಿರ್ವಹಣೆ ಮಾಡುವಲ್ಲಿ ಮಂಡಳಿಯು ವಿಫಲವಾದರೆ ಅಥವಾ ನಿರ್ಲಕ್ಷ್ಯ ತೋರಿದರೆ 3ನೇ ಪ್ರಕರಣದಲ್ಲಿ ಏನೇ ಇದ್ದಾಗ್ಯೂ, ಮಂಡಳಿಯನ್ನು ರದ್ದುಗೊಳಿಸುವುದು ಮತ್ತು ಅದನ್ನು ನಿಗದಿತ ರೀತಿಯಲ್ಲಿ ಪುನಃ ರಚಿಸುವುದು ಸರ್ಕಾರಕ್ಕೆ ಕಾನೂನುಸಮ್ಮತವಾಗಿರತಕ್ಕದ್ದು.

(3) ಮಂಡಳಿಯನ್ನು ರದ್ದುಪಡಿಸಿದ ತರುವಾಯ ಮತ್ತು ಅದನ್ನು ಪುನಾರಚಿಸುವವರೆಗೆ ಈ ಅಧಿನಿಯಮದ ಅಡಿಯಲ್ಲಿನ ಮಂಡಳಿಯ ಅಧಿಕಾರಗಳು, ಕರ್ತವ್ಯಗಳು ಮತ್ತು ಪ್ರಕಾರ್ಯಗಳನ್ನು ರಾಜ್ಯ ಸರ್ಕಾರ ಅಥವಾ ಈ ಉದ್ದೇಶಕ್ಕಾಗಿ ರಾಜ್ಯ ಸರ್ಕಾರವು ನೇಮಕ ಮಾಡಬಹುದಾದಂಥ ಅಧಿಕಾರಿ ಅಥವಾ ಅಧಿಕಾರಿಗಳು ನಿರ್ವಹಿಸತಕ್ಕದ್ದು.

**41. ಮಂಡಳಿಯ ವಿಘಟನೆ.-** (1) ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ, ಆ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದ ದಿನಾಂಕದಿಂದ ಜಾರಿಗೆ ಬರುವಂತೆ, ಮಂಡಳಿಯು ವಿಘಟಿತವಾಗತಕ್ಕದ್ದೆಂದು ಘೋಷಿಸಬಹುದು:

ಪರಂತು, ಅಂಥ ಯಾವುದೇ ಘೋಷಣೆಯನ್ನು, ಆ ಅಭಿಪ್ರಾಯದ ಒಂದು ನಿರ್ಣಯವನ್ನು ರಾಜ್ಯ ವಿಧಾನಮಂಡಲದ ಉಭಯ ಸದನಗಳ ಮುಂದೆ ಮಂಡಿಸಿ ಅವುಗಳು ಅದನ್ನು ಅನುಮೋದಿಸಿದ ಹೊರತು, ರಾಜ್ಯ ಸರ್ಕಾರವು ಮಾಡತಕ್ಕದ್ದಲ್ಲ.

(2) (1)ನೇ ಉಪ-ಪ್ರಕರಣದ ಅಡಿಯಲ್ಲಿನ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಿದ ದಿನಾಂಕದಿಂದ ಪರಿಣಾಮಕಾರಿಯಾಗುವಂತೆ,-

(ಎ) ಮಂಡಳಿಯಲ್ಲಿ ನಿಹಿತವಾದ ಮತ್ತು ಅದರಿಂದ ವಸೂಲಾಗತಕ್ಕ ಎಲ್ಲ ಸ್ವತ್ತುಗಳು, ನಿಧಿಗಳು ಮತ್ತು ಬಾಕಿಗಳು ರಾಜ್ಯ ಸರ್ಕಾರದಲ್ಲಿ ನಿಹಿತವಾಗತಕ್ಕದ್ದು ಮತ್ತು ಅದು ವಸೂಲಿ ಮಾಡಬಹುದಾಗಿರತಕ್ಕದ್ದು.

(ಬಿ) ಮಂಡಳಿಯ ವಿರುದ್ಧ ಅಮಲು ಜಾರಿಮಾಡಬಹುದಾದ ಎಲ್ಲ ಹೊಣೆಗಳು, ರಾಜ್ಯ ಸರ್ಕಾರದಲ್ಲಿ ನಿಹಿತವಾದ ಮತ್ತು ಅದರಿಂದ ವಸೂಲಿಯಾದ ಸ್ವತ್ತು, ನಿಧಿ ಮತ್ತು ಬಾಕಿಗಳಷ್ಟರ ಮಟ್ಟಿಗೆ ರಾಜ್ಯ ಸರ್ಕಾರದ ವಿರುದ್ಧ ಅಮಲು ಜಾರಿಯಾಗಬಹುದಾಗಿರತಕ್ಕದ್ದು.

**42. ರಾಜ್ಯ ಸರ್ಕಾರದ ನಿಯಂತ್ರಣ.-** (1) ಮಂಡಳಿಯ ಎಲ್ಲ ಕಾರ್ಯಚಟುವಟಿಕೆಗಳು ಮತ್ತು ವ್ಯವಹಾರಗಳ ಮೇಲೆ ರಾಜ್ಯ ಸರ್ಕಾರವು ಸಾಮಾನ್ಯ ಆಡಳಿತಾತ್ಮಕ ನಿಯಂತ್ರಣ ಮತ್ತು ಅಧೀಕ್ಷಣೆ ಹೊಂದಿರತಕ್ಕದ್ದು.

(2) ರಾಜ್ಯ ಸರ್ಕಾರವು, ಮಂಡಳಿಯ, ಆಯುಕ್ತರ ಅಥವಾ ಮಂಡಳಿಯ ಅಧೀನದ ಯಾವೊಬ್ಬ ಅಧಿಕಾರಿಯ ಯಾವುವೇ ವ್ಯವಹರಣೆಗಳ ದಾಖಲೆಗಳನ್ನು, ಅಂಥ ವ್ಯವಹರಣೆಗಳ ಸರಿಯಾಗಿರುವಿಕೆ, ಕಾನೂನು ಬದ್ಧತೆ ಅಥವಾ ಔಚಿತ್ಯಗಳ ಬಗ್ಗೆ ತಾನು ಮನದಟ್ಟು ಮಾಡಿಕೊಳ್ಳುವ ಉದ್ದೇಶಕ್ಕಾಗಿ ತರಿಸಿಕೊಳ್ಳಬಹುದು ಮತ್ತು ಅವುಗಳ ಬಗ್ಗೆ ತಾನು ಸೂಕ್ತವೆಂದು ಭಾವಿಸಿದಂಥ ಆದೇಶಗಳನ್ನು ಹೊರಡಿಸಬಹುದು.

**43. ನಿರ್ದೇಶನಗಳನ್ನು ನೀಡುವುದಕ್ಕೆ ರಾಜ್ಯ ಸರ್ಕಾರದ ಅಧಿಕಾರ.-** ರಾಜ್ಯ ಸರ್ಕಾರವು ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ತಾನು ಅವಶ್ಯಕ ಮತ್ತು ಸಮಯೋಚಿತವೆಂದು ಅಭಿಪ್ರಾಯ ಪಡುವಂಥ ನಿರ್ದೇಶನಗಳನ್ನು ಮಂಡಳಿಗೆ ಕೊಡಬಹುದು ಮತ್ತು ಅಂಥ ನಿರ್ದೇಶನಗಳನ್ನು ಪಾಲಿಸುವುದು ಮಂಡಳಿಯ ಕರ್ತವ್ಯವಾಗಿರತಕ್ಕದ್ದು.

**44. ತೊಂದರೆಗಳ ನಿವಾರಣೆ.-** ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೆ ತರುವಲ್ಲಿ, ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು ಆ ತೊಂದರೆಯ ನಿವಾರಣೆಗಾಗಿ, ತಾನು ಅವಶ್ಯಕ ಮತ್ತು ಸಮಯೋಚಿತವೆಂದು ಅಭಿಪ್ರಾಯಪಡುವಂಥ ಉಪಬಂಧಗಳನ್ನು ಅಧಿಸೂಚನೆಯ ಮೂಲಕ ಮಾಡಬಹುದು.

**45. ನಿಯಮಗಳ ರಚನಾಧಿಕಾರ.-** (1) ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ, ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಮೇರೆಗೆ ರಚಿಸಲಾದ ಪ್ರತಿಯೊಂದು ನಿಯಮವನ್ನು, ಅಥವಾ ಅಧಿಸೂಚನೆಯನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಅದು ಅಧಿವೇಶನದಲ್ಲಿರುವಾಗ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚಿನ ನಿರಂತರ ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನಗಳ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನದ ಮುಕ್ತಾಯಕ್ಕೆ ಮುಂಚೆ ಆ ನಿಯಮದಲ್ಲಿ ಅಥವಾ ಅಧಿಸೂಚನೆಯಲ್ಲಿ ಯಾವುದೇ ಮಾರ್ಪಾಟನ್ನು ಮಾಡಬೇಕೆಂದು ಎರಡೂ ಸದನಗಳೂ ಒಪ್ಪಿದರೆ ಅಥವಾ ಆ ನಿಯಮವನ್ನು ಅಥವಾ ಅಧಿಸೂಚನೆಯನ್ನು ಮಾಡಕೂಡದೆಂದು ಎರಡೂ ಸದನಗಳೂ ಒಪ್ಪಿದರೆ ಆ ನಿಯಮವು ಅಥವಾ ಅಧಿಸೂಚನೆಯು ಆ ಮಾರ್ಪಾಟನ್ನು ಅಥವಾ ರದ್ದತಿಯನ್ನು ಅಧಿಸೂಚಿಸಿದ ದಿನಾಂಕದಿಂದ ಸಂದರ್ಭಾನುಸಾರ ಅಂಥ ಮಾರ್ಪಾಟಾದ ರೂಪದಲ್ಲಿ ಮಾತ್ರ ಪರಿಣಾಮಕಾರಿಯಾಗಿರತಕ್ಕದ್ದು ಅಥವಾ ಯಾವುದೇ ಪರಿಣಾಮ ಹೊಂದಿರತಕ್ಕದ್ದಲ್ಲ; ಆದಾಗ್ಯೂ ಅಂಥ ಯಾವುದೇ ಮಾರ್ಪಾಟು ಅಥವಾ ರದ್ದತಿಯು ಆ ನಿಯಮದ ಅಥವಾ ಅಧಿಸೂಚನೆಯ ಮೇರೆಗೆ ಹಿಂದೆ ಮಾಡಿದ ಯಾವುದೇ ಕೃತ್ಯದ ಮಾನ್ಯತೆಗೆ ಬಾಧಕವಾಗತಕ್ಕದ್ದಲ್ಲ.

**46. ವಿನಿಯಮಗಳ ರಚನಾಧಿಕಾರ.-** ಮಂಡಳಿಯು, ಈ ಅಧಿನಿಯಮದ ಉಪಬಂಧಗಳಿಗೆ ಮತ್ತು 45ನೇ ಪ್ರಕರಣದ ಮೇರೆಗೆ ರಚಿಸಲಾದ ನಿಯಮಗಳಿಗೆ ಒಳಪಟ್ಟು ಮತ್ತು ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿಯೊಂದಿಗೆ ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸುವುದಕ್ಕೆ ಅಧಿಸೂಚನೆಯ ಮೂಲಕ ವಿನಿಯಮಗಳನ್ನು ರಚಿಸಬಹುದು.

**47. ನಿರಸನ ಮತ್ತು ಉಳಿಸುವಿಕೆಗಳು.-** (1) ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ ಅಧ್ಯಾದೇಶ, 2004ನ್ನು (2004ರ ಕರ್ನಾಟಕ ಅಧ್ಯಾದೇಶ ಸಂಖ್ಯೆ 4) ಈ ಮೂಲಕ ನಿಸನಗೊಳಿಸಲಾಗಿದೆ.

(2) ಹಾಗೆ ನಿರಸಿತಗೊಳಿಸಿದ್ದಾಗ್ಯೂ, ಸದರಿ ಅಧ್ಯಾದೇಶದ ಮೂಲಕ ತಿದ್ದುಪಡಿ ಮಾಡಲಾದ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾದ ಯಾವುದೇ ಕಾರ್ಯ ಅಥವಾ ಕೈಗೊಳ್ಳಲಾದ ಯಾವುದೇ ಕ್ರಮವನ್ನು ಈ ಅಧಿನಿಯಮದ ಮೂಲಕ ತಿದ್ದುಪಡಿ ಮಾಡಲಾದ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

**ಅನುಸೂಚಿ**

**(2ನೇ ಪ್ರಕರಣದ (ಜಿ) ಖಂಡವನ್ನು ನೋಡಿ)**

**ಬಸವಕಲ್ಯಾಣದಲ್ಲಿ ಪರಂಪರೆಯ ತಾಣಗಳು ಮತ್ತು ಸ್ಮಾರಕಗಳು**

1. ಕೋಟೆ
2. ಪರುಷಕಟ್ಟೆ
3. ಬಸವೇಶ್ವರ ಗುಡಿ
4. ಕಿನ್ನರಿ ಬೊಮ್ಮಯ್ಯನ ಗವಿ
5. ಮೋಳಿಗೆಯ ಮಾರಯ್ಯನಗುಡಿ
6. ದೇವರ ದಾಸಿಮಯ್ಯ / ಜೇಡರ ದಾಸಿಮಯ್ಯ ಗವಿಗಳು
7. ಕಂಬಳಿ ಮಠ
8. ಬಸವ ಭವನ
9. ಸದಾನಂದ ಮಠ
10. ಹರಳಯ್ಯನ ಗವಿ ಮತ್ತು ಗುಡಿ
11. ಬಸವ ವನ
12. ಜಾತ್ರೆ ಮೈದಾನ
13. ಪ್ರಭುದೇವರ ಗದ್ದಿಗೆ
14. ಮಡಿವಾಳ ಮಾಚಯ್ಯನ ಗದ್ದಿಗೆ ಮತ್ತು ಹೊಂಡ
15. ಶಿವಪುರ ಶಿವಗುಡಿ
16. ನಾರಾಯಣಪುರ ಶಿವಗುಡಿ
17. ಅಕ್ಕ ನಾಗಮ್ಮನ ಗವಿ
18. ಬಸವೇಶ್ವರ ಮಹಾಮನೆ ಇದ್ದ ಸ್ಥಳ - ಅರಿವಿನ ಗವಿ
19. ತ್ರಿಪುರಾಂತಕೇಶ್ವರನ ಗುಡಿ
20. ಧರ್ಮಶಾಲೆ
21. ತ್ರಿಪುರಾಂತಕ ಹಳ್ಳಿಯ ಪವಿತ್ರ ಸ್ಥಳಗಳು
22. ತ್ರಿಪುರಾಂತಕ ಕೆರೆ
23. ರುದ್ರಮುನಿ ಮತ್ತು ವಿಜ್ಞಾನೇಶ್ವರ ಗವಿಗಳು

24. ನೂತನ ಅನುಭವ ಮಂಟಪ

25. ಪಂಚಸೂತ್ರ ಗವಿ

26 ನುಲಿಯ ಚಂದಯ್ಯನ ಗವಿ

27. ಬಾಂದವರ ಓಣಿ - ಸಾಂಪ್ರದಾಯಿಕವಾಗಿ ಹಾಗೆಂದು ಕರೆಯುತ್ತಾರೆ.

28. ಯಲಹೂಟಿ ಸ್ಥಳ

29. ಪುರಾತತ್ವ ಇಲಾಖೆಯ ವಸ್ತು ಸಂಗ್ರಹಾಲಯ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**ಜಿ. ದಕ್ಷಿಣಾಮೂರ್ತಿ**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.